ವಿಜಯಪುರ | ಸಂಪುಟ 04 | ಸಂಚಿಕೆ 149 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ


ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಮಂಗಳವಾರ, ಆಗಸ್ಟ್, 04, 2026

"ವಿಜಯಪುರ ಜಿಲ್ಲೆಯ ರಾಜಕಾರಣ ಸದ್ಯ ಬೀದಿಗೆ ಬಂದಿದೆ. ಕಾಂಗ್ರೆಸ್ ಪಕ್ಷದಲ್ಲಿ ಸದ್ಯ ನಿಷ್ಠಾವಂತರು ಮತ್ತು ಪ್ರಾಮಾಣಿಕರಿಗೆ ಬೆಲೆಯಿಲ್ಲದಂತಾಗಿದೆ. ಯಾವುದೇ ಕಾರಣಕ್ಕೂ ನಾನು ರಾಜೀನಾಮೆಯನ್ನು ವಾಪಸ್ ಪಡೆಯುವುದಿಲ್ಲ ಮತ್ತು ಶಾಸಕನಾಗಿ ಮುಂದುವರಿಯುವುದಿಲ್ಲ."



■ ಯಶವಂತ್ರಾಯಗೌಡ ಪಾಟೀಲ
ಶಾಸಕರು, ಇಂಡಿ

## ಪರೀಕ್ಷೆ ನಿರ್ವಹಣಾ ಲೋಪಗಳ ತನಿಖೆಗೆ ಒತ್ತಾಯಿಸಿ ಮನವಿ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕರ್ನಾಟಕ ರಾಜ್ಯ ಕನ್ನಡಿಗರ ವೇದಿಕೆ ವತಿಯಿಂದ ಆ.2 ರಂದು ನಡೆದ ಪೊಲೀಸ್ ಕಾನ್ಸೇಬಲ್ (ಸಿಇಟಿ) ಪರೀಕ್ಷೆಯಲ್ಲಿನ ಪರೀಕ್ಷಾ ನಿರ್ವಹಣಾ ಲೋಪಗಳ ಕುರಿತು ತನಿಖೆ ಒತ್ತಾಯಿಸಿ ಜಿಲ್ಲಾಧಿಕಾರಿ ಡಾ.ಆನಂದ ಅವರಿಗೆ ಮನವಿ ಸಲ್ಲಿಸಿದರು

ಈ ವೇಳೆ ಕರ್ನಾಟಕ ರಾಜ್ಯ ಕನ್ನಡಿಗರ ವೇದಿಕೆ ರಾಜ್ಯಾಧ್ಯಕ್ಷ ಲಕ್ಷ್ಮಣ ಕಂಬಾಗಿ ಮಾತನಾಡಿ, ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆಇಎ) ವತಿಯಿಂದ ರಾಜ್ಯಾದ್ಯಂತ ನಡೆಸಲಾದ ಪೊಲೀಸ್ ಕಾನ್ಸೆ ಬಲ್ (ಸಿಇಟಿ) ಪರೀಕ್ಷೆಯ ಸಂದರ್ಭದಲ್ಲಿ ವಿಜಯಪುರ ಜಿಲ್ಲೆ ಸೇರಿದಂತೆ ವಿವಿಧ ಜಿಲ್ಲೆಗಳ ಪರೀಕ್ಷಾ ಕೇಂದ್ರಗಳಲ್ಲಿ ಮೊದಲ ಬಾರಿಗೆ ಪ್ರಶ್ನೆಪತ್ರಿಕೆಯ ಕ್ರಮ ಸಂಖ್ಯೆ ಮತ್ತು[ ಓಎಂಆರ್ ] ಉತ್ತರ ಪತ್ರಿಕೆಯ ಸಂಖ್ಯೆಯಲ್ಲಿ ವ್ಯತ್ಯಾಸವಿರುವ ವ್ಯವಸ್ಥೆ ಜಾರಿಗೊಳಿಸಲಾಗಿತ್ತು. ಇಂತಹ ಪ್ರಮುಖ ಬದಲಾವಣೆಯ ಕುರಿತು ಅಭ್ಯರ್ಥಿಗಳಿಗೆ ಮುಂಚಿತವಾಗಿ ಸ್ಪಷ್ಟ ಮಾಹಿತಿ ನೀಡುವುದು ಹಾಗೂ ಪರೀಕ್ಷಾ ಕೇಂದ್ರಗಳಲ್ಲಿ ಸರಿಯಾದ ಮಾರ್ಗದರ್ಶನ ನೀಡುವುದು ಸಂಬಂಧಪಟ್ಟ ಅಧಿಕಾರಿಗಳ ಕರ್ತವ್ಯವಾಗಿತ್ತು.

ಅದರ, ಅಗತ್ಯ ಮಾಹಿತಿ ಮತ್ತು ಮಾರ್ಗದರ್ಶನದ ಕೊರತೆಯಿಂದಾಗಿ ರಾಜ್ಯದ ಹಲವು ಪರೀಕ್ಷಾ ಕೇಂದ್ರಗಳಲ್ಲಿ ಅಭ್ಯರ್ಥಿಗಳು ಗೊಂದಲ ಹಾಗೂ ಆತಂಕಕ್ಕೆ ಒಳಗಾಗಿದ್ದಾರೆ. ಸ್ಪರ್ಧಾತ್ಮಕ ಪರೀಕ್ಷೆಗಳು ಅಭ್ಯರ್ಥಿಗಳ ಭವಿಷ್ಯದ ದೃಷ್ಟಿಯಿಂದ ಅತ್ಯಂತ ಮಹತ್ವದ್ದಾಗಿರುವುದರಿಂದ, ಇಂತಹ ಲೋಪಗಳಿಂದ ಯಾವುದೇ ಅಭ್ಯರ್ಥಿಗೆ ಅನ್ಯಾಯವಾಗದಂತೆ ಕ್ರಮ ಕೈಗೊಳ್ಳುವುದು ಸರ್ಕಾರ ಮತ್ತು ಪರೀಕ್ಷಾ ಪ್ರಾಧಿಕಾರದ ಜವಾಬ್ದಾರಿಯಾಗಿದೆ.

ಆದ್ದರಿಂದ ಪರೀಕ್ಷೆಯಲ್ಲಿನ ರಾಜ್ಯವ್ಯಾಪಿ ಗೊಂದಲದ ಕುರಿತು ಸಮಗ್ರ ಹಾಗೂ ನಿಷ್ಪಕ್ಷಪಾತ ತನಿಖೆ ನಡೆಸಿ, ಕರ್ತವ್ಯ ಲೋಪ ಎಸಗಿದ ಅಧಿಕಾರಿಗಳು, ಮೇಲ್ವಿಚಾರಕರು ಹಾಗೂ ಸಂಬಂಧಪಟ್ಟ ಸಿಬ್ಬಂದಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಗಿರೀಶ ಕಲಘಟಗಿ ಹಣಮಂತ ನಾಯ್ಕೋಡಿ ಇದ್ದರು.

## ಯಶಸ್ವಿ ಪರೀಕ್ಷಾ ನಿರ್ವಹಣೆ: ಜಿಲ್ಲಾಡಳಿತಕ್ಕೆ ದ್ರಾವಿಪ ಶ್ಲಾಘನೆ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲೆಯ ತಿಕೋಟಾ ಪರೀಕ್ಷಾ ಕೇಂದ್ರದಲ್ಲಿ ನಡೆದ ಪೊಲೀಸ್ ಕಾನ್‌ಸ್ಟೇಬಲ್ ನೇಮಕಾತಿ ಪರೀಕ್ಷೆಯನ್ನು ಯಾವುದೇ ಗೊಂದಲಗಳಿಗೆ ಆಸ್ಪದ ನೀಡದೆ, ಅತ್ಯಂತ ಯಶಸ್ವಿಯಾಗಿ ಮತ್ತು ಪಾರದರ್ಶಕವಾಗಿ ನಿರ್ವಹಿಸಿದ ಜಿಲ್ಲಾಡಳಿತ ಹಾಗೂ ಜಿಲ್ಲಾ ಪೊಲೀಸ್ ಇಲಾಖೆಯ ಕಾರ್ಯವೈಖರಿಯನ್ನು ದ್ರಾವಿಡ ವಿದ್ಯಾರ್ಥಿ ಪರಿಷತ್ ಮುಕ್ತಕಂಠದಿಂದ ಶ್ಲಾಘಿಸಿದೆ. ಈ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳನ್ನು ಭೇಟಿಯಾದ ಸಂಘಟನೆಯ ನಿಯೋಗವು, ಯಶಸ್ವಿ ಪರೀಕ್ಷಾ ನಿರ್ವಹಣೆಗಾಗಿ ಖುದ್ದಾಗಿ ಸ್ಥಳದಲ್ಲಿದ್ದು ತತ್‌ಕ್ಷಣದ ಕ್ರಮ ವಹಿಸಿದ ಜಿಲ್ಲಾಡಳಿತದ ಪರವಾಗಿ ಜಿಲ್ಲಾಧಿಕಾರಿಗಳಿಗೆ ಪುಸ್ತಕ ಹಾಗೂ ಧನ್ಯವಾದ ಪ್ರಶಂಸನೀಯ ಪತ್ರ ನೀಡಿ ಸನ್ಮಾನಿಸಲಾಯಿತು.

ಪ್ರಾಮಾಣಿಕವಾಗಿ ಪರೀಕ್ಷೆ ಬರೆದ ಅಭ್ಯರ್ಥಿಗಳ ಹಿತರಕ್ಷಣೆಗೆ ಜಿಲ್ಲಾಡಳಿತ ಭದ್ರವಾಗಿ ನಿಂತಿರುವುದು ಶ್ಲಾಘನೀಯ.

ಸಮಾಜಘಾತುಕ ಶಕ್ತಿಗಳು ಅಥವಾ ವದಂತಿ ಹರಡುವವರು ಎಷ್ಟೇ ಗೊಂದಲ ಸೃಷ್ಟಿಸಲು ಯತ್ನಿಸಿದರೂ ಜಿಲ್ಲಾಡಳಿತವು ಧೃತಿಗೆಡಬಾರದು ಎಂದು ಈ ಸಂದರ್ಭದಲ್ಲಿ ವಿದ್ಯಾರ್ಥಿ ಮುಖಂಡರು ಹೇಳಿದರು. ಕಟ್ಟುನಿಟ್ಟಿನ ಭದ್ರತೆ ಮತ್ತು ನಿಯಮಾವಳಿಗಳಂತೆ ಪರೀಕ್ಷೆ ನಡೆಸಿ ಸತ್ಯಾಸತ್ಯತೆಯನ್ನು ಸಾರ್ವಜನಿಕರಿಗೆ ಸ್ಪಷ್ಟಪಡಿಸುವ ಮೂಲಕ ಜಿಲ್ಲಾಡಳಿತವು ವಿದ್ಯಾರ್ಥಿಗಳಲ್ಲಿ ಭರವಸೆ ಮೂಡಿಸಿದೆ. ವಿದ್ಯಾರ್ಥಿ ಸಮೂಹವು ಯಾವಾಗಲೂ ಪಾರದರ್ಶಕ ಆಡಳಿತದ ಪರವಾಗಿದ್ದು, ಜಿಲ್ಲಾಡಳಿತಕ್ಕೆ ಸಂಪೂರ್ಣ ಸ್ಥೈರ್ಯ ತುಂಬುತ್ತದೆ ಎಂದು ಸಂಘಟನೆ ತಿಳಿಸಿದೆ.

ಈ ಸಂದರ್ಭದಲ್ಲಿ ಗೌಡಪ್ಪ ಬಡಿಗೇರ, ಅಕ್ಷಯ್ ಕುಮಾರ್ ಅಜಮನಿ, ಪ್ರವೀಣ್ ಕರವಿನಾಳ, ಹುಚ್ಚಪ್ಪ ಬಾವಿಮನಿ, ಸಂಜೀವ್, ಕಿರಣ್, ಪ್ರಭು ಇತರ ಹಲವಾರು ವಿದ್ಯಾರ್ಥಿಗಳಿದ್ದರು.

# ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದ 19 ಶಾಸಕರು

## ಸಂಪುಟ ವಿಸ್ತರಣೆಯಲ್ಲಿ ಬಿಗ್ ಟ್ವಿಸ್ಟ್ । ಕೊನೆ ಕ್ಷಣದಲ್ಲಿ ಒಬ್ಬರಿಗೆ ಕೊಕ್! । ಲೋಕಭವನದಲ್ಲಿ ನಡೆದ ಸಮಾರಂಭದಲ್ಲಿ ರಾಜ್ಯಪಾಲರಿಂದ ಸಚಿವರಿಗೆ ಪ್ರತಿಜ್ಞಾವಿಧಿ ಬೋಧನೆ

ಬೆಂಗಳೂರು: ಕೊನೆಗೂ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ನೇತೃತ್ವದ ಸಚಿವ ಸಂಪುಟ ಸೋಮವಾರ ಸಂಜೆ ವಿಸ್ತರಣೆಯಾಗಿದೆ. ಕಾಂಗ್ರೆಸ್ ಹೈಕಮಾಂಡ್ 20 ನೂತನ ಸಚಿವರ ಹೆಸರನ್ನು ಪ್ರಕಟಿಸಿತ್ತಾದರೂ ಕೊನೆ ಕ್ಷಣದಲ್ಲಿ 19 ಮಂದಿ ಮಾತ್ರ ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದ್ದಾರೆ.

ಸೋಮವಾರ ಸಂಜೆ 5 ಗಂಟೆಗೆ ಲೋಕಭವನದಲ್ಲಿ ನಡೆದ ಸಮಾರಂಭದಲ್ಲಿ ರಾಜ್ಯಪಾಲ ತಾವರ್‌ಚಂದ್ ಗೆಹ್ಲೋಟ್ ಅವರು 19 ಸಚಿವರಿಗೆ ಮಾತ್ರ ಪ್ರತಿಜ್ಞಾವಿಧಿ ಬೋಧಿಸಿದರು.




ಮೊದಲಿಗೆ ಮಾಜಿ ಮುಖ್ಯಮಂತ್ರಿ ದಿವಂಗತ ಧರ್ಮಸಿಂಗ್ ಅವರ ಪುತ್ರ ಡಾ. ಅಜಯ್ ಸಿಂಗ್ ಅವರು ಪ್ರಮಾಣವಚನ ಸ್ವೀಕರಿಸಿದರು. ಬಳಿಕ ಕ್ರಮವಾಗಿ ಎಚ್.ಸಿ.ಬಾಲಕೃಷ್ಣ, ಕೆ.ಎಸ್.ಬಸವಂತಪ್ಪ, ಬಸವರಾಜ್ ರಾಯರೆಡ್ಡಿ, ಎನ್. ಚಲುವರಾಯಸ್ವಾಮಿ, ಲಕ್ಷ್ಮಣ್ ಸವದಿ, ಮಧು ಬಂಗಾರಪ್ಪ, ಎಸ್. ಎಸ್. ಮಲ್ಲಿಕಾರ್ಜುನ್, ಬಿ.ನಾಗೇಂದ್ರ, ಪಿ.ಎಂ.ನರೇಂದ್ರಸ್ವಾಮಿ, ಸಿ.ಪುಟ್ಟರಂಗಶೆಟ್ಟಿ, ಟಿ.ರಘುಮೂರ್ತಿ, ರಿಜ್ವಾನ್ ಅರ್ಷದ್, ರುದ್ರಪ್ಪ ಲಮಾಣಿ, ಸಂತೋಷ್ ಲಾಡ್, ಶಿವಲಿಂಗೇಗೌಡ, ಶಿವರಾಜ್ ತಂಗಡಗಿ, ವಿಜಯಾನಂದ ಕಾಶಪ್ಪನವರ್, ಜಮೀರ್ ಅಹ್ಮದ್ ಖಾನ್ ಅವರು ಪ್ರಮಾಣವಚನ ಸ್ವೀಕರಿಸಿದರು.

ಈ ಸಮಾರಂಭಕ್ಕೆ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗೈರಾಗಿದ್ದರು.

ಇದಕ್ಕೂ ಮುನ್ನ, ಎಐಸಿಸಿ ಪ್ರಧಾನ ಕಾರ್ಯದರ್ಶಿ(ಸಂಘಟನೆ) ಕೆ.ಸಿ. ವೇಣುಗೋಪಾಲ್ ಅವರು ಸಿಎಂ ಶಿವಕುಮಾರ್ ಅವರಿಗೆ ಪತ್ರ ಬರೆದು, ಸಂಪುಟಕ್ಕೆ ಸೇರಿಸಿಕೊಳ್ಳಲು 20 ಸಚಿವರ ಹೆಸರುಗಳನ್ನು ಕಾಂಗ್ರೆಸ್ ಹೈಕಮಾಂಡ್ ಅನುಮೋದಿಸಿರುವ ಬಗ್ಗೆ ಮಾಹಿತಿ ನೀಡಿದ್ದರು.

ಆದಾಗ್ಯೂ, ಕಾಂಗ್ರೆಸ್ ಹೈಕಮಾಂಡ್ ಅನುಮೋದಿಸಿದ ಅಂತಿಮ ಪಟ್ಟಿಯಲ್ಲಿದ್ದ ಗಾಯತ್ರಿ ಶಾಂತೇಗೌಡ ಅವರು ಸೋಮವಾರ ಪ್ರಮಾಣವಚನ ಸ್ವೀಕರಿಸಲಿಲ್ಲ. ಇದರೊಂದಿಗೆ ಕರ್ನಾಟಕ ಸಚಿವ ಸಂಪುಟದಲ್ಲಿ ಮಹಿಳಾ ಪ್ರಾತಿನಿಧ್ಯ ಇಲ್ಲದಂತಾಗಿದೆ.

ಕೊನೇ ಕ್ಷಣದಲ್ಲಿ ನಡೆದ ದಿಢೀರ್ ರಾಜಕೀಯ ಬೆಳವಣಿಗೆಗಳಿಂದಾಗಿ ಈ ನಿರ್ಧಾರಕ್ಕೆ ಬರಲಾಗಿದ್ದು, ಮಹಿಳಾ ಶಾಸಕರ ನಡುವಿನ ತೀವ್ರ ಪೈಪೋಟಿಯೇ ಇದಕ್ಕೆ ಕಾರಣ ಎನ್ನಲಾಗಿದೆ.

### ಮಹಿಳಾ ಸಚಿವ ಸ್ಥಾನಕ್ಕಾಗಿ ಪೈಪೋಟಿ



ಮಹಿಳಾ ಸಚಿವ ಸ್ಥಾನಕ್ಕೆ ಗಾಯತ್ರಿ ಅವರ ಹೆಸರು ಘೋಷಣೆ ನಡುವೆಯೂ ಲಕ್ಷ್ಮೀ ಹೆಬ್ಬಾಳ್ಕರ್ ಉಮಾಶ್ರೀ ನಡುವೆ ತೀವ್ರ ಪೈಪೋಟಿ ನಡೆದಿದೆ. ಹೀಗಾಗಿ ಮಾಜಿ ಸಿಎಂ ಸಿದ್ದರಾಮಯ್ಯನವರ ನಿವಾಸದಲ್ಲಿ ಮಹತ್ವದ ಸಭೆ ನಡೆಸಲಾಗಿದ್ದು, ಕೊನೆ ಕ್ಷಣದಲ್ಲಿ ಗಾಯತ್ರಿ ಹೆಸರು ಬಿಡಲೇಬೇಕು ಎಂಬ ರಾಜ್ಯ ನಾಯಕರ ಒತ್ತಡಕ್ಕೆ ಕಾಂಗ್ರೆಸ್ ವರಿಷ್ಠರು ಮಣಿದಿದ್ದಾರೆ.

### ಗಾಯತ್ರಿ ಶಾಂತೇಗೌಡಗೆ ಕೋಕ್!



20 ಮಂದಿ ನೂತನ ಸಚಿವರ ಪಟ್ಟಿಯಲ್ಲಿ ಗಾಯತ್ರಿ ಶಾಂತೇಗೌಡ ಅವರ ಹೆಸರಿತ್ತು. ಆದರೆ ಪ್ರಮಾಣವಚನ ಸ್ವೀಕರಿಸಲು ಸಿಎಂ ಕಡೆಯಿಂದ ಅವರಿಗೆ ಯಾವುದೇ ಕರೆ ಬಂದಿಲ್ಲ. ಪರಿಷತ್ ಸದಸ್ಯೆಯಾಗಿ ಗಾಯತ್ರಿ ಇನ್ನೂ ಪ್ರಮಾಣ ಸ್ವೀಕರಿಸದ ಕಾರಣ ಪಕ್ಷದಲ್ಲಿ ಈ ಬಗ್ಗೆ ಅಸಮಾಧಾನ ಭುಗಿಲೆದ್ದ ಕಾರಣ, ಪಕ್ಷ ಈ ತೀರ್ಮಾನ ಕೈಗೊಂಡಿರುವ ಮಾಹಿತಿ ಇದೆ.

# ವಿಜಯಪುರದಲ್ಲಿ ಎಬಿವಿಪಿ ಕಾರ್ಯಕರ್ತರ ಬಂಧನ!

■ ಉದಯರಶ್ಮಿ ದಿನಪತ್ರಿಕೆ



### ತಿಕೋಟದಲ್ಲಿ ಪೊಲೀಸ್ ಕಾನ್ಸೆಬಲ್ ನೇಮಕಾತಿ ಪರೀಕ್ಷೆ ಗೊಂದಲಕ್ಕೆ ಖಂಡನೆ । ಎಬಿವಿಪಿ ಕಾರ್ಯಕರ್ತರಿಂದ ಪ್ರತಿಭಟನೆ

ವಿಜಯಪುರ: ಜಿಲ್ಲೆಯ ತಿಕೋಟದಲ್ಲಿ ಪೊಲೀಸ್ ಕಾನ್ಸೆಬಲ್ ನೇಮಕಾತಿ ಪರೀಕ್ಷೆಯಲ್ಲಿ ನಡೆದ ಗೊಂದಲವನ್ನು ಖಂಡಿಸಿ ಹಾಗೂ ಅನ್ಯಾಯಕ್ಕೆ ಒಳಗಾದ ಅಭ್ಯರ್ಥಿಗಳಿಗೆ ನ್ಯಾಯ ಒದಗಿಸುವಂತೆ ಆಗ್ರಹಿಸಿ ನಗರದ ಗಾಂಧಿ ವೃತ್ತದಲ್ಲಿ ಎಬಿವಿಪಿ ಕಾರ್ಯಕರ್ತರು ಪ್ರತಿಭಟನೆ ಮಾಡಿದರು.

ಈ ವೇಳೆ ಎಬಿವಿಪಿಯ ವಿಭಾಗ ಸಂಘಟನಾ ಕಾರ್ಯದರ್ಶಿ ಹರ್ಷಾ ನಾಯಕ ಮಾತನಾಡಿ, ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಅತ್ಯಂತ ಸೂಕ್ಷ್ಮವಾಗಿ, ವ್ಯವಸ್ಥಿತವಾಗಿ ಪರೀಕ್ಷೆ ನಡೆಸಿದ್ದೇವೆ ಎಂದು ಹೇಳುತ್ತಾರೆ. ಆದರೆ ತಿಕೋಟಾ ಪರೀಕ್ಷಾ ಕೇಂದ್ರದಲ್ಲಿ ಅರ್ಧ ಗಂಟೆಗೂ ಅಧಿಕ ಕಾಲ ತಡವಾಗಿ ಪ್ರಶ್ನೆ ಪತ್ರಿಕೆ ಕೊಟ್ಟಿರುದ್ದಕ್ಕೆ ಕಾರಣ ಏನು, ವಿಜಯಪುರ ಜಿಲ್ಲೆಯ ಜಿಲ್ಲಾಧಿಕಾರಿಗಳು ಹೇಳಿದಂತೆ ಪ್ರಶ್ನೆ ಪತ್ರಿಕೆ ಗೊಂದಲವನ್ನು ಸರಿ ಪಡಿಸಲು ಸಮಯ ತಡವಾಗಿದೆ ಅದಕ್ಕೆ ನಾವು ಕೆಇಎ ಜೊತೆ ಮಾತನಾಡಿ ತಡವಾದ ಅಭ್ಯರ್ಥಿಗಳಿಗೆ ಸಮಯ ನೀಡುತ್ತೇವೆ ಎಂದು ಹೇಳಿಕೆ ನೀಡಿದ್ದಾರೆ, ಅಂದರೆ ಗೊಂದಲವಾಗಿರುವುದು ಸತ್ಯದ ವಿಷಯ, ಈ ವಿಷಯವನ್ನು ಮುಚ್ಚಿ ಹಾಕಲು ಸರಕಾರ ಪೊಲೀಸ್ ಇಲಾಖೆಯ ಮೂಲಕ ಎಬಿಬಿಪಿ ಕಾರ್ಯಕರ್ತರನ್ನು ಬಂಧನ ಮಾಡಿ ಹತ್ತಿಕ್ಕುವ ಪ್ರಯತ್ನ ಮಾಡುತ್ತಿದೆ ಎಂದರು.

ಪರೀಕ್ಷೆ ಕೇಂದ್ರದಲ್ಲಿ ಪರೀಕ್ಷಾರ್ಥಿಗಳಿಗೆ ಪ್ರಶ್ನೆ ಪತ್ರಿಕೆಗಳನ್ನು ನಿಗದಿತ ಸಮಯಕ್ಕೆ ವಿತರಣೆ ಮಾಡದ ಕಾರಣ ಗಂಭೀರ ಅವ್ಯವಸ್ಥೆ ಉಂಟಾಗಿದೆ. ಈ ಘಟನೆಯಿಂದ ಅನೇಕ ಅಭ್ಯರ್ಥಿಗಳು ಮಾನಸಿಕ ಒತ್ತಡಕ್ಕೆ ಒಳಗಾಗಿದ್ದು,ಪರೀಕ್ಷೆಯನ್ನುಸಮರ್ಪಕವಾಗಿ ಬರೆಯಲು ಸಾಧ್ಯವಾಗದ ಪರಿಸ್ಥಿತಿ ನಿರ್ಮಾಣವಾಗಿದೆ. ರಾಜ್ಯದ ಪ್ರತಿಷ್ಠಿತ ನೇಮಕಾತಿ ಪರೀಕ್ಷೆಗಳು ಪಾರದರ್ಶಕ, ನ್ಯಾಯಸಮ್ಮತ ಹಾಗೂ ಅಭ್ಯರ್ಥಿಗಳ ಹಿತಾಸಕ್ತಿಯನ್ನು ಕಾಪಾಡುವ ರೀತಿಯಲ್ಲಿ ನಡೆಯುವುದು ಅತ್ಯಗತ್ಯವಾಗಿದೆ. ಆದರೆ ಈ ರೀತಿಯ ಆಡಳಿತಾತ್ಮಕ ಲೋಪದಿಂದ ಅಭ್ಯರ್ಥಿಗಳ ಭವಿಷ್ಯದ ಮೇಲೆ ಪ್ರತಿಕೂಲ ಪರಿಣಾಮ ಉಂಟಾಗುವ ಸಾಧ್ಯತೆಯಿದೆ ಎಂದಿದ್ದಾರೆ.

ಆದ್ದರಿಂದ ತಾವು ಈ ಘಟನೆಯ ಕುರಿತು ಸಮಗ್ರ ತನಿಖೆ ನಡೆಸಿ, ಘಟನೆಯ ನೈಜ ಕಾರಣವನ್ನು ಬಹಿರಂಗಪಡಿಸಬೇಕು. ತಪ್ಪಿತಸ್ಥರ ವಿರುದ್ಧ ಕಾನೂನುಬದ್ಧ ಹಾಗೂ ಶಿಸ್ತು ಕ್ರಮ ಕೈಗೊಂಡು, ಯಾವುದೇ ಅಭ್ಯರ್ಥಿಗೆ ಅನ್ಯಾಯವಾಗದಂತೆ ನ್ಯಾಯಸಮ್ಮತ ನಿರ್ಧಾರ ಕೈಗೊಳ್ಳುವಂತೆ ಆಗ್ರಹಿಸಿದರು.

ಜಿಲ್ಲಾ ಸಂಘಟನಾ ಕಾರ್ಯದರ್ಶಿ ಹಣಮಂತ ಹಳ್ಳೂರು, ಪ್ರಾಂತ ಕಾರ್ಯಸಮಿತಿ ಸದಸ್ಯ ಸಂದೀಪ ಅರಳಗುಂಡಿ ಸೇರಿದಂತೆ ಎಬಿವಿಪಿ ಕಾರ್ಯಕರ್ತರನ್ನು ಪೊಲೀಸರು ಬಂಧಿಸಿದರು.

ಎಬಿವಿಪಿಯ ಕೇಂದ್ರೀಯ ಕಾರ್ಯಸಮಿತಿ ಸದಸ್ಯ ಸಚಿನ ಕುಳಗೇರಿ ಸೇರಿದಂತೆ ಅನೇಕರಿದ್ದರು.

ಪ್ರಮುಖ ಆಗ್ರಹಗಳು: ಪ್ರಶ್ನೆ ಪತ್ರಿಕೆ ತಡವಾಗಿ ವಿತರಣೆಗೊಂಡ ಘಟನೆಯ ಕುರಿತು ಉನ್ನತ ಮಟ್ಟದ ತನಿಖೆ ನಡೆಸಬೇಕು.

ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಸೂಕ್ತ ಶಿಸ್ತು ಕ್ರಮ ಕೈಗೊಳ್ಳಬೇಕು. ಅಭ್ಯರ್ಥಿಗಳಿಗೆ ಯಾವುದೇ ರೀತಿಯ ಅನ್ಯಾಯವಾಗದಂತೆ ನ್ಯಾಯಸಮ್ಮತ ಕ್ರಮ ಕೈಗೊಳ್ಳಬೇಕು. ಮುಂದಿನ ದಿನಗಳಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಜಾರಿಗೊಳಿಸಬೇಕು. ಶಾರದಾಂಬೆ ಪಿಯು ಕಾಲೇಜಿನಲ್ಲಿ ನಡೆದಿರುವ ಪರೀಕ್ಷೆಯನ್ನು ಮರು ಪರೀಕ್ಷೆ ಮಾಡಬೇಕು.

# ಶಾಸಕ ಸ್ಥಾನಕ್ಕೆ ಯಶವಂತರಾಯಗೌಡ ರಾಜೀನಾಮೆ!

## ಇಂಡಿ ವಿಧಾನಸಭಾ ಕ್ಷೇತ್ರದಲ್ಲಿ ರಾಜಕೀಯ ಬಿರುಗಾಳಿ । ಕ್ಷೇತ್ರದ ಕಾಂಗ್ರೆಸ್ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ರಾಜೀನಾಮೆ ನೀಡಲು ಸಜ್ಜು

■ ಉದಯರಶ್ಮಿ ದಿನಪತ್ರಿಕೆ

ಇಂಡಿ: ಮೂರು ಬಾರಿ ಇಂಡಿ ಮತಕ್ಷೇತ್ರದಿಂದ ಶಾಸಕರಾಗಿ ಆಯ್ಕೆಯಾಗಿರುವ ಯಶವಂತರಾಯಗೌಡ ಪಾಟೀಲ್ ಅವರಿಗೆ ಸಚಿವ ಸಂಪುಟ ವಿಸ್ತರಣೆಯಲ್ಲಿ ಸಚಿವ ಸ್ಥಾನ ಕೈತಪ್ಪಿರುವುದು ಇಂಡಿ ವಿಧಾನಸಭಾ ಕ್ಷೇತ್ರದಲ್ಲಿ ಭಾರಿ ರಾಜಕೀಯ ಬಿರುಗಾಳಿಯನ್ನೇ ಎಬ್ಬಿಸಿದೆ.

ಪಕ್ಷದ ಹೈಕಮಾಂಡ್ ನಿರ್ಧಾರದಿಂದ ತೀವ್ರ ಬೇಸರಗೊಂಡಿರುವ ಶಾಸಕ ಯಶವಂತರಾಯಗೌಡರು ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಇದರ ಬೆನ್ನಲ್ಲೇ ಕ್ಷೇತ್ರದ ಕಾಂಗ್ರೆಸ್ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ತೀವ್ರ ಆಕ್ರೋಶ ವ್ಯಕ್ತಪಡಿಸಿ, ಸರಣಿ ರಾಜೀನಾಮೆ ನೀಡಲು ಸಜ್ಜಾಗಿದ್ದಾರೆ.

ಸ್ವಾತಂತ್ರ್ಯದ ನಂತರವೂ ಸಿಗದ ಪ್ರಾತಿನಿಧ್ಯ: ವಿಜಯಪುರ ಜಿಲ್ಲೆಯ ಪ್ರಮುಖ ಗಡಿಭಾಗದ ಕ್ಷೇತ್ರವಾದ ಇಂಡಿಗೆ ಸ್ವಾತಂತ್ರ್ಯ ಬಂದ ದಿನದಿಂದ ಇದುವರೆಗೂ ಒಂದೇ ಒಂದು ಸಚಿವ ಸ್ಥಾನ ಸಿಕ್ಕಿಲ್ಲ ಎಂಬುದು ಇಲ್ಲಿನ ಜನರ ದಶಕಗಳ ಕಾಲದ ನೋವು. ಸತತವಾಗಿ ಪಕ್ಷವನ್ನು ಗೆಲ್ಲಿಸಿಕೊಂಡು ಬರುತ್ತಿದ್ದರೂ, ಇಂಡಿ ತಾಲೂಕನ್ನು ಸಚಿವ ಸಂಪುಟದಿಂದ ದೂರವಿಟ್ಟಿರುವುದು ಗಾಯದ ಮೇಲೆ ಉಪ್ಪು ಸವರಿದಂತಾಗಿದೆ ಎಂದು ಸ್ಥಳೀಯ ಮುಖಂಡರು ಕಿಡಿಕಾರಿದ್ದಾರೆ.

38 ವರ್ಷಗಳಿಗೂ ಹೆಚ್ಚು ಕಾಲ ಸಾರ್ವಜನಿಕ ಜೀವನದಲ್ಲಿ ಕಳಂಕರಹಿತ ಸೇವೆ ಸಲ್ಲಿಸಿರುವ ಯಶವಂತ್ರಾಯಗೌಡರು ಜಿಲ್ಲಾ ಪಂಚಾಯತ್ ಸದಸ್ಯರಾಗಿ, ಹಾಗೂ ಮೂರು ಬಾರಿ ಶಾಸಕರಾಗಿ ಆಯ್ಕೆಯಾಗಿದ್ದಾರೆ. ಈ ಬಾರಿಯಾದರೂ ಸಚಿವ ಸ್ಥಾನ ಸಿಗಲಿದೆ ಎಂಬ ಜನಾಪೇಕ್ಷೆ ಸಂಪೂರ್ಣ ಹುಸಿಯಾಗಿದೆ.

### ಜಿಲ್ಲಾ ರಾಜಕಾರಣದ ವೈಷಮ್ಯ

ರಾಜೀನಾಮೆ ನೀಡಿದ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಯಶವಂತ್ರಾಯಗೌಡರು ಜಿಲ್ಲೆಯ ಉಸ್ತುವಾರಿ ಸಚಿವ ಎಂ.ಬಿ. ಪಾಟೀಲ್ ವಿರುದ್ಧ ನೇರವಾಗಿಯೇ ಆಕ್ರೋಶ ಹೊರಹಾಕಿದ್ದಾರೆ. ಜಿಲ್ಲೆಯ ರಾಜಕಾರಣ ಸದ್ಯ ಬೀದಿಗೆ ಬಂದಿದೆ. ಕಾಂಗ್ರೆಸ್ ಪಕ್ಷದಲ್ಲಿ ಸದ್ಯ ನಿಷ್ಠಾವಂತರು ಮತ್ತು ಪ್ರಾಮಾಣಿಕರಿಗೆ ಬೆಲೆಯಿಲ್ಲದಂತಾಗಿದೆ ಎಂದು ಬೇಸರ ವ್ಯಕ್ತಪಡಿಸಿದ್ದಾರೆ. ಯಾವುದೇ ಕಾರಣಕ್ಕೂ ನಾನು ರಾಜೀನಾಮೆಯನ್ನು ವಾಪಸ್ ಪಡೆಯುವುದಿಲ್ಲ ಮತ್ತು ಶಾಸಕನಾಗಿ ಮುಂದುವರಿಯುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ಭರವಸೆ ಹುಸಿ: ನಾಯಕರ ವಿರುದ್ಧ ತಿರುಗಿಬಿದ್ದ ಕಾರ್ಯಕರ್ತರು ಪಕ್ಷದ ಪ್ರಮುಖ ನಾಯಕರು, ನಾಯಕತ್ವ ಬದಲಾವಣೆ ಮತ್ತು ಸಂಪುಟ ಪುನಾರಚನೆ ಸಂದರ್ಭದಲ್ಲಿ ಯಶವಂತರಾಯಗೌಡ ಅವರಿಗೆ ಸಚಿವ ಸ್ಥಾನ ನೀಡುವ ಸ್ಪಷ್ಟ ಭರವಸೆ ನೀಡಿದ್ದರು ಎಂದು ಕಾರ್ಯಕರ್ತರು ನೆನಪಿಸಿದ್ದಾರೆ. ಆದರೆ, ಇತ್ತೀಚೆಗೆ ನಡೆದ ರಾಜಕೀಯ ಬೆಳವಣಿಗೆಗಳು ಮತ್ತು ಸಂಪುಟ ವಿಸ್ತರಣೆಯಲ್ಲಿ ಅವರ ಹೆಸರನ್ನು ಕೈಬಿಟ್ಟಿರುವುದು ಇಡೀ ಕ್ಷೇತ್ರದ ಸ್ವಾಭಿಮಾನಕ್ಕೆ ಧಕ್ಕೆ ತಂದಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಬೆಂಗಳೂರಿನಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನಿವಾಸದ ಮುಂಭಾಗದಲ್ಲೂ ಕಾರ್ಯಕರ್ತರು ಈ ಹಿಂದೆ ಜಮಾಯಿಸಿ ಸಚಿವ ಸ್ಥಾನಕ್ಕಾಗಿ ತೀವ್ರ ಒತ್ತಾಯ ಹೇರಿದ್ದರು.

ಹೈಕಮಾಂಡ್ ತಕ್ಷಣವೇ ಮಧ್ಯಪ್ರವೇಶಿಸಿ ಇಂಡಿ ತಾಲೂಕಿಗೆ ಆಗಿರುವ ಐತಿಹಾಸಿಕ ಅನ್ಯಾಯವನ್ನು ಸರಿಪಡಿಸಬೇಕೆಂದು ಕಾರ್ಯಕರ್ತರು ಪಟ್ಟು ಹಿಡಿದಿದ್ದಾರೆ.

### ಸಾಮೂಹಿಕ ರಾಜೀನಾಮೆಗೆ ನಿರ್ಧಾರ

ಶಾಸಕರ ಅಸಮಾಧಾನದ ಬೆನ್ನಲ್ಲೇ ಇಂಡಿ ಬ್ಲಾಕ್ ಕಾಂಗ್ರೆಸ್, ತಾಲೂಕು ಮಟ್ಟದ ಪದಾಧಿಕಾರಿಗಳು ಮತ್ತು ಮುಂಚೂಣಿ ಘಟಕಗಳ ನಾಯಕರು ಜಂಟಿ ಸಭೆ ನಡೆಸಿದ್ದಾರೆ. ಕ್ಷೇತ್ರಕ್ಕೆ ಸಚಿವ ಸ್ಥಾನ ನೀಡದೆ ಹೈಕಮಾಂಡ್ ತಾರತಮ್ಯ ಎಸಗಿದೆ ಎಂದು ಆರೋಪಿಸಿರುವ ಪದಾಧಿಕಾರಿಗಳು, ಶಾಸಕರ ನಿರ್ಧಾರಕ್ಕೆ ಬೆಂಬಲ ಸೂಚಿಸಿ ತಮ್ಮ ಸ್ಥಾನಗಳಿಗೆ ಸಾಮೂಹಿಕ ರಾಜೀನಾಮೆ ಪತ್ರಗಳನ್ನು ಸಿದ್ಧಪಡಿಸಿಕೊಳ್ಳುತ್ತಿದ್ದಾರೆ.

ಈ ದಿಢೀರ್ ಬಂಡಾಯ ಕಾಂಗ್ರೆಸ್ ಮುಖಂಡರಿಗೆ ದೊಡ್ಡ ತಲೆನೋವಾಗಿ ಪರಿಣಮಿಸಿದೆ. ಗಡಿ ಭಾಗದಲ್ಲಿ ಪಕ್ಷವನ್ನು ಗಟ್ಟಿಯಾಗಿ ಹಿಡಿದಿಟ್ಟುಕೊಂಡಿರುವ ಯಶವಂತರಾಯಗೌಡ ಅವರ ಅಸಮಾಧಾನವನ್ನು ಶಮನಗೊಳಿಸದಿದ್ದರೆ, ಮುಂಬರುವ ದಿನಗಳಲ್ಲಿ ವಿಜಯಪುರ ಜಿಲ್ಲೆಯಾದ್ಯಂತ ಕಾಂಗ್ರೆಸ್ ಪಕ್ಷಕ್ಕೆ ಭಾರಿ ಹಿನ್ನಡೆಯಾಗುವ ಮುನ್ಸೂಚನೆ ಸಿಕ್ಕಿದೆ.

ಬೆಂಗಳೂರಿನ ಶಾಸಕರ ಭವನದ ಮುಂಭಾಗದಲ್ಲಿ ಯಶವಂತ್ರಾಯಗೌಡ ಪಾಟೀಲರ ಬೆಂಬಲಿಗರು ಪ್ರತಿಭಟನೆ ನಡೆಸಿದ್ದು ಪ್ರತಿಭಟನೆಯಲ್ಲಿ ಶಿವಯೋಗೆಪ್ಪ ಚನಗೊಂಡ, ಶ್ರೀಕಾಂತ ಕೂಡಿಗನೂರ, ಸತೀಶ ಕುಂಬಾರ, ಜಾವೀದ ಮೋಮಿನ್ ಸದಾಶಿವ ಪ್ಯಾಟಿ, ಪ್ರಶಾಂತ ಕಾಳೆ, ಬೀರಪ್ಪ ಪೂಜಾರಿ, ಅಯೂಬ ಬಾಗವಾನ, ಅಣ್ಣಾರಾಯ ಬಬಲಾದ ಸೇರಿದಂತೆ ನೂರಾರು ಕಾರ್ಯಕರ್ತರು ಭಾಗವಹಿಸಿದ್ದರು.



ಯಡ್ರಾಮಿ ವಿರಕ್ತಮಠದಲ್ಲಿ ಲಿಂ.ಸಿದ್ಧರಾಮ ಮಹಾಸ್ವಾಮಿಗಳ ಪುಣ್ಯ ಸ್ಮರಣೋತ್ಸವ। ಗ್ರಂಥ ಲೋಕಾರ್ಪಣೆ। ಭಕ್ತಿಯಲ್ಲಿ ಮಿಂದ ಭಕ್ತಗಣ।

# ಮಾಧ್ಯಮ ಕ್ಷೇತ್ರದ ಸಾಧಕ ಬಾಬುರಾವ, ಇಂದುಶೇಖರ ದಂಪತಿಗೆ ಸತ್ಕಾರ

■ ಉದಯರಶ್ಮಿ ದಿನಪತ್ರಿಕೆ





ಯಡ್ರಾಮಿ: ಪಟ್ಟಣದ ಶ್ರೀ ಮುರಘೇಂದ್ರ ಶಿವಯೋಗಿ ವಿರಕ್ತ ಮಠದ ಲಿಂ.ಪೂಜ್ಯ ಶ್ರೀ ಸಿದ್ಧರಾಮ ಮಹಾಸ್ವಾಮಿಗಳ 5ನೇ ಪುಣ್ಯಾರಾಧನೆ ಯ 10ನೇ ದಿನ ಶುಕ್ರವಾರ ಶ್ರೀ ಮಠದ ಪೀಠಾಧಿಪತಿ ಶ್ರೀ ಸಿದ್ಧಲಿಂಗ ಸ್ವಾಮಿಗಳ ನೇತೃತ್ವದಲ್ಲಿ ಶ್ರೀ ಶರಣ ಗೊಲ್ಲಾಳೇಶ್ವರ ಮಹಾಪುರಾಣ ಮಂಗಲ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರಿಗೆ ಸತ್ಕಾರ ಸಮಾರಂಭ ನೆರವೇರಿತು.

ಮಾಧ್ಯಮ ಕ್ಷೇತ್ರದಲ್ಲಿ ಸುಮಾರು ಮೂರು ದಶಕಗಳಿಂದ ಸೇವೆ ಸಲ್ಲಿಸುತ್ತಿರುವ ಹಿರಿಯ ಪತ್ರಕರ್ತರಾದ ಕಲಬುರಗಿ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಬಾಬುರಾವ ಯಡ್ರಾಮಿ ಅವರಿಗೆ ಹಾಗೂ ವಿಜಯಪುರ ಜಿಲ್ಲೆಯ ಕಾರ್ಯನಿರತ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಇಂದುಶೇಖರ ಮಣೂರ ದಂಪತಿಗೆ ಸತ್ಕಾರ, ಶ್ರೀರಕ್ಷೆ ಕಾರ್ಯಕ್ರಮವು ನಡೆಯಿತು. ಇದೇ ಸಂದರ್ಭದಲ್ಲಿ ಶಿಕ್ಷಕ, ಸಾಹಿತಿ ಬಸಯ್ಯಸ್ವಾಮಿ ಕಕ್ಕೇರಾ ರಚಿತ 'ನಿರಂಜನ ಪ್ರಭೆ' ಗ್ರಂಥವನ್ನು ಸೊನ್ನ ವಿರಕ್ತಮಠದ ಡಾ.ಶಿವಾನಂದ ಮಹಾಸ್ವಾಮಿಗಳು ಲೋಕಾರ್ಪಣೆಗೊಳಿಸಿದರು.

ಶ್ರೀ ಮುರಘೇಂದ್ರ ಭಜನಾ ಮಂಡಳಿಯ ಕಲಾವಿದರಿಗೆ ಹಾಗೂ ಲಿಂ. ಸಿದ್ಧರಾಮ ಮಹಾಸ್ವಾಮಿಗಳ ಪಂಚಲೋಹದ ಮೂರ್ತಿ ದಾನಿಗಳಾದ ಶರಣೆ ರಾಚಮ್ಮ ಮುಗುಳಿ ಅವ–ರಿಗೂ ಸತ್ಕಾರ ಕಾರ್ಯ ನೆರವೇರಿಸಲಾಯಿತು. ರವಿವಾರಬೆಳಗ್ಗೆಕತೃಗದ್ದುಗೆಗೆಮಹಾರುದ್ರಾಭಿಷೇಕ ಕಾರ್ಯಕ್ರಮ, ಬಿಲ್ವಾರ್ಚನೆಯೊಂದಿಗೆ ಕಾರ್ಯಕ್ರಮ ಸಂಪನ್ನಗೊಂಡಿತು. ನಂತರ ಮಹಾಪ್ರಸಾದ ಜರುಗಿತು. ಈ ಸಂದರ್ಭದಲ್ಲಿ ಸುರಪುರ ಕಡ್ಲೆಪ್ಪನವರ ಮಠದ ಶ್ರೀಗಳು, ಸೊನ್ನದ ಶ್ರೀಗಳು ಸುತ್ತ ಮುತ್ತಲಿನ ಗ್ರಾಮಗಳ ಸಹಸ್ರಾರು ಭಕ್ತರು ಇದ್ದರು.



ಶ್ರೀ ಮಠದ ಸಿದ್ದಲಿಂಗ ಶ್ರೀಗಳು ಆಗಾಗ ರಚನಾತ್ಮಕ ಹಾಗೂ ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಈ ಭಾಗದಲ್ಲಿ ಭಕ್ತಿಯ ಸುಧೆ ಹರಿಸುತ್ತಿದ್ದಾರೆ. ಇಂತಹ ಸಾಂಸ್ಕೃತಿಕ ದಾಸೋಹದಿಂದ ನಮ್ಮ ಸಂಸ್ಕೃತಿ ಮತ್ತು ಪರಂಪರೆಯನ್ನು ಮುಂದಿನ ಪೀಳಿಗೆಗೆ ಉಳಿಸುವಲ್ಲಿ ಅವರ ಪಾತ್ರ ಅನನ್ಯ. ಇದು ಸಾಲದೆಂಬಂತೆ ಈಗ ಶಿಕ್ಷಣ ಸಂಸ್ಥೆಯನ್ನು ಸ್ಥಾಪಿಸಿರುವ ಅವರು ಈ ಭಾಗದ ಬಡ ಮಕ್ಕಳಿಗೆ ಶಿಕ್ಷಣ ದಾಸೋಹಗೈಯಲು ಮುಂದಾಗಿರುವುದು ಶ್ಲಾಘನೀಯ."

■ - ಇಂದುಶೇಖರ ಮಣೂರ
ಸಂಪಾದಕರು, 'ಉದಯರಶ್ಮಿ' ದಿನಪತ್ರಿಕೆ

ಮುಂಬಯಿಯಲ್ಲಿ ಕನ್ನಡ ಪತ್ರಕರ್ತರ ಸಂಭ್ರಮ। ರಾಷ್ಟ್ರೀಯ ಮಾಧ್ಯಮ ಪ್ರಶಸ್ತಿ ಸ್ವೀಕರಿಸಿದ ಜಿ.ಎನ್. ಮೋಹನ್ ಅಭಿಮತ

# ಮಾಧ್ಯಮವು ಪ್ರಜಾಪ್ರಭುತ್ವದ ಕಾವಲುಗಾರವಾಗಿರಬೇಕು

■ ಉದಯರಶ್ಮಿ ದಿನಪತ್ರಿಕೆ




ಮುಂಬೈ: ಏಕ ಭಾಷೆ, ಏಕ ಉಡುಪು, ಏಕ ಆಹಾರ ಸಂಸ್ಕೃತಿಯನ್ನು ರೂಪಿಸುವ ಪ್ರಯತ್ನಗಳಂತೆ, ದೇಶದಲ್ಲಿ ಸದ್ದಿಲ್ಲದೆ ಏಕ ಮಾಧ್ಯಮದ ಪರಿಕಲ್ಪನೆಯನ್ನು ರೂಪಿಸುವ ಯತ್ನವೂ ನಡೆಯುತ್ತಿದೆ ಎಂದು ಹಿರಿಯ ಪತ್ರಕರ್ತ ಹಾಗೂ ಮಾಧ್ಯಮ ತಜ್ಞ ಜಿ.ಎನ್. ಮೋಹನ್ ಆತಂಕ ವ್ಯಕ್ತಪಡಿಸಿದರು.

ಕನ್ನಡಿಗ ಪತ್ರಕರ್ತರ ಸಂಘ, ಮಹಾರಾಷ್ಟ್ರ ಹಾಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ) ಮುಂಬೈ ಘಟಕದ ವತಿಯಿಂದ ಪತ್ರಿಕಾ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಸಮಾರಂಭದಲ್ಲಿ ರಾಷ್ಟ್ರೀಯ ಮಾಧ್ಯಮ ಪ್ರಶಸ್ತಿ ಸ್ವೀಕರಿಸಿ ಅವರು ಮಾತನಾಡಿದರು.

"ಮಾಧ್ಯಮವು ಸಮಾಜದ ಕನ್ನಡಿ ಮತ್ತು ಪ್ರಜಾಪ್ರಭುತ್ವದ ಕಾವಲುಗಾರವಾಗಿರಬೇಕು. ಆದರೆ ಅದು ಉದ್ಯಮದ ಸ್ವರೂಪವನ್ನು ಪಡೆದ ಕ್ಷಣದಿಂದಲೇ ಸಮಾಜವನ್ನು ಕಟ್ಟುವ ತನ್ನ ಮೂಲ ಜವಾಬ್ದಾರಿಯಿಂದ ದೂರ ಸರಿಯಲು ಆರಂಭಿಸಿತು. ಇಂದು ಮಾಧ್ಯಮವು ಹಣ ಮತ್ತು ಅಧಿಕಾರ ಎರಡನ್ನೂ ತಂದುಕೊಡುವ ಪ್ರಬಲ ಸಾಧನವಾಗಿ ರೂಪುಗೊಂಡಿರುವುದು ಆತಂಕಕಾರಿ ಬೆಳವಣಿಗೆ" ಎಂದು ಅವರು ಹೇಳಿದರು. ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ) ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು, "ಉದ್ಯೋಗ ಅರಸಿ ಮುಂಬಯಿಗೆ ಬಂದ ಕನ್ನಡಿಗರು ಈ ಮಹಾನಗರದ ಬೆಳವಣಿಗೆಯಲ್ಲಿ ಮಹತ್ವದ ಪಾತ್ರ ವಹಿಸಿದ್ದಾರೆ. ಮರಾಠಿ ನೆಲದಲ್ಲಿ ಕನ್ನಡ ಪತ್ರಕರ್ತರು ಪ್ರಾಮಾಣಿಕ ಪತ್ರಿಕೋದ್ಯಮದ ಮೂಲಕ ಕನ್ನಡದ ಸೇವೆ ಸಲ್ಲಿಸುತ್ತಿರುವುದು ಹೆಮ್ಮೆಯ ಸಂಗತಿ. ಇಂತಹ ನೆಲದಲ್ಲಿ ಕನ್ನಡ ಪತ್ರಕರ್ತರನ್ನು ಒಂದೇ ವೇದಿಕೆಯಲ್ಲಿ ಒಗ್ಗೂಡಿಸಿ, ಕೆಯುಡಬ್ಲ್ಯೂಜೆ ಮುಂಬೈ ಘಟಕವನ್ನು ಬಲಿಷ್ಠ ಸಂಘಟನೆಯಾಗಿ ಬೆಳೆಸಿರುವುದು ನಿಜಕ್ಕೂ ಅಭಿನಂದನೀಯ" ಎಂದು ಹೇಳಿದರು.

ಮುಂಬಯಿಯಲ್ಲಿ ಕನ್ನಡ ಪತ್ರಕರ್ತರ ಸಂಘಟನೆಯನ್ನು ಕಟ್ಟಿಬೆಳೆಸಲು ಶ್ರಮಿಸಿದ ರೋನ್ಸ್ ಬಂಟ್ವಾಳ, ಶಿವು ಮೂಡಿಗೆರೆ, ದಯಾನಂದ ಸಾಲಿಯಾನ (ಸಾದಯ್ಯ) ಸೇರಿದಂತೆ ಎಲ್ಲ ಪದಾಧಿಕಾರಿಗಳು ಹಾಗೂ ಸದಸ್ಯರ ಸೇವೆಯನ್ನು ಅವರು ವಿಶೇಷವಾಗಿ ಶ್ಲಾಘಿಸಿ ಅಭಿನಂದಿಸಿದರು. ಸಮಾರಂಭದಲ್ಲಿ ಕೆಯುಡಬ್ಲ್ಯೂಜೆ ಮುಂಬೈ ಘಟಕದ ಅಧ್ಯಕ್ಷ ಶಿವು ಮೂಡಿಗೆರೆ, ಪ್ರಧಾನ ಕಾರ್ಯದರ್ಶಿ ರೋನ್ಸ್ ಬಂಟ್ವಾಳ, ಸಂಘದ ಗೌರವ ಸಲಹೆಗಾರ ಐ.ಆರ್. ಶೆಟ್ಟಿ, ಡಾ. ಕಿರಣ್ ಶೆಟ್ಟಿ, ಕಪಸಂ ಅಧ್ಯಕ್ಷೆ ಡಾ. ಜಿ.ಪಿ. ಕುಸುಮ, ಸದಾರಾಮ ಶೆಟ್ಟಿ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದು, ಪತ್ರಿಕೋದ್ಯಮದ ಮೌಲ್ಯಗಳು, ಕನ್ನಡ ಭಾಷೆಯ ಬೆಳವಣಿಗೆ ಹಾಗೂ ಸಂಘಟಿತ ಶಕ್ತಿಯ ಮಹತ್ವದ ಕುರಿತು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು.

ಪತ್ರಿಕಾ ದಿನಾಚರಣೆಯ ಅಂಗವಾಗಿ ನಡೆದ ಈ ಸಮಾರಂಭವು ಕನ್ನಡ ಪತ್ರಕರ್ತರ ಒಗ್ಗಟ್ಟು, ವೃತ್ತಿಪರ ಬದ್ಧತೆ, ಭಾಷಾಭಿಮಾನ ಮತ್ತು ಸಾಮಾಜಿಕ ಜವಾಬ್ದಾರಿಯನ್ನು ಮತ್ತೊಮ್ಮೆಅನಾವರಣಗೊಳಿಸಿದಸ್ಮರಣೀಯ ಕಾರ್ಯಕ್ರಮವಾಗಿ ಮೂಡಿಬಂತು

# ಶಿಶುವಿಗೆ ಹಾಲುಣಿಸಿ ಸೋಂಕಿನಿಂದ ದೂರವಿಡಿ :ಡಿಎಚ್ಒ ಡಾ.ಮಲ್ಲನಗೌಡ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: ತಾಯಿ ಎದೆಹಾಲು ಅಮೃತಕ್ಕೆ ಸಮಾನವಾಗಿದ್ದು, ಸದೃಢ ಮಗುವಿನ

ಆರೋಗ್ಯದ ದೃಷ್ಟಿಯಿಂದ ತಾಯಂದಿರು ನವಜಾತ ಶಿಶುಗಳಿಗೆ ಎದೆಹಾಲು ನೀಡುವಲ್ಲಿ ನಿರ್ಲಕ್ಷ್ಯ ಮಾಡಬಾರದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾ–ರಿಗಳಾದ ಡಾ. ಮಲ್ಲನಗೌಡ ಬಿರಾದಾರ ಅವರು ಹೇಳಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಆಸ್ಪತ್ರೆ ವಿಜಯಪುರ, ಸುಸೇನಾ ಹೆಲ್ತ್ ಫೌಂಡೇಶನ್, ದಾತ್ರಿ ಮದರ್ಸ ಮಿಲ್ಕ್ ಬ್ಯಾಂಕ್ ಮತ್ತು ಸಿ.ಎಲ್.ಎಮ್.ಸಿ ವಿಜಯಪುರ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ವಿಶ್ವ ಸ್ತನ್ಯಪಾನ ಸಪ್ತಾಹ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಈ ವರ್ಷದ ಘೋಷವಾಕ್ಯದಂತೆ ಸುಸ್ಥಿರ ಜೀವನದ ಭದ್ರ ಅಡಿಪಾಯಕ್ಕಾಗಿ ಸ್ತನ್ಯಪಾನ ಪರಿಣಾಮಕಾರಿ ವಿಧಾನ ಸದೃಢಗೊಳಿಸೋಣ ಎಂಬ ಸಂದೇಶವನ್ನು ಎಲ್ಲ ತಾಯಿಂದರಿಗೆ ಸಮರ್ಪಕವಾಗಿ ಜಾಗೃತಿ ಮೂಡಿಸಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು.

ಗರ್ಭಿಣಿ ಹಾಗೂ ಬಾಣಂತಿಯ–ರಿಗಾಗಿಮತ್ತುಮಕ್ಕಳಆರೋಗ್ಯಸುಧಾರಣೆಗಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಹಲವಾರು ಯೋಜನೆಗಳನ್ನು ಸದುಪಯೋಗ ಪಡೆದುಕೊಳ್ಳಬೇಕು. ತಾಯಿ ತನ್ನ ಎದೆಹಾಲು ಉಣಿಸುವುದರಿಂದ ಮಗುವಿನ ಆರೋಗ್ಯದಲ್ಲಿ ಧನಾತ್ಮಕ ಪರಿಣಾಮಗಳಾಗುತ್ತವೆ. ಮಗುವಿನ ಬುದ್ಧಿಶಕ್ತಿಯನ್ನು ಹೆಚ್ಚಿಸುತ್ತದೆ. ಅಂತರ ಹೊಂದುವುದುರಿಂದ ಅಂಡಾಶಯ ಕ್ಯಾನ್ಸರ್ ಮತ್ತು ಅಧಿಕ ರಕ್ತದೊತ್ತಡ ಕಡಿಮೆ ಮಾಡಲು ಸಾಧ್ಯವಿದೆ ಎಂದ ಅವರು, ಮಗುವಿಗೆ ಹಾಲುಣಿಸುವಿಕೆಯಿಂದ ಸಾಂಕ್ರಾಮಿಕ ಕಾಯಿಲೆಗಳಾದ ಅತಿಸಾರ, ಉಸಿರಾಟದ ಸೋಂಕುಗಳನ್ನು ದೂರವಿಡಬಹುದು ಎಂದು ಹೇಳಿದರು. ಜಿಲ್ಲಾ ಸಂತಾನೋತ್ಪತ್ತಿ ಮತ್ತು ಮಕ್ಕಳ ಆರೋಗ್ಯಾಧಿಕಾರಿ ಡಾ. ಪರಸುರಾಮ ಹಿಟ್ನಳ್ಳಿ ಮಾತನಾಡಿ, ತಾಯಿ ಹಾಗೂ ತಾಯಿ ಎದೆ ಹಾಲಿನ ಮಹತ್ವದ ಬಗ್ಗೆ ಅರಿವು ಮೂಡಿಸಬೇಕಾದ ಅಗತ್ಯವಿದೆ. ತಾಯಿಯ ಎದೆ ಹಾಲಿಗೆ ಪ್ರಪಂಚದಲ್ಲಿ ಬೆಲೆ ಕಟ್ಟಲು ಸಾಧ್ಯವಿಲ್ಲ. ಪ್ರತಿಯೊಬ್ಬ ತಾಯಿಯು ತನ್ನ ಮಗುವಿಗೆ ಎದೆ ಹಾಲುಣಿಸುವ ಮೂಲಕ ದೇಶದ ಆರೋಗ್ಯವಂತ ಪ್ರಜೆಯನ್ನಾಗಿ ರೂಪಿಸಬೇಕು. ಹುಟ್ಟಿದ ಮಗುವಿಗೆ ಆರು ತಿಂಗಳವರೆಗೆ ತಾಯಿಯ ಎದೆ ಹಾಲುಣಿಸಬೇಕು. ಮಗು ಬೇರೆ ಪದಾರ್ಥಗಳನ್ನು ಸೇವಿಸುವ ಮಗುವಿಗಿಂತ ಕಾಯಿಲೆಗೊಳಗಾಗುತ್ತದೆ ಮತ್ತು ಹೆಚ್ಚು ಆರೋಗ್ಯಕರವಾಗಿರುತ್ತದೆ ಎಂದರು.


ತಾಲೂಕಾ ಆರೋಗ್ಯಾಧಿಕಾರಿ ಡಾ. ಸಂತೋಷ ಶೆಟ್ಟಿ ಮಾತನಾಡಿ, ಮಗುವಿಗೆ ಎದೆ ಹಾಲು ಅಮೃತವಿದ್ದಂತೆ. ಪೌಷ್ಠಿಕ ಆಹಾರವನ್ನು ತಾಯಂದಿರು ಸೇವಿಸಬೇಕು. ಯಾವುದಕ್ಕೂ ಮಗುವಿಗೆ ಎದೆ ಹಾಲು ನೀಡುವುದನ್ನು ತಪ್ಪಿಸಬಾರದು. ಎಲ್ಲ ತಾಯಂದಿರು ತಮ್ಮ ಮಗುವಿಗೆ ಹುಟ್ಟಿನಿಂದ 2 ವರ್ಷದ ವರೆಗೆ ತಾಯಿ ಹಾಲುಣಿಸಬೇಕು ಎಂದರು. ಜಿಲ್ಲಾ ಆಸ್ಪತ್ರೆಯ ದಾತ್ರಿ ಮದರ್ಸ ಮಿಲ್ಕ್ ಬ್ಯಾಂಕ್ ನ ಡಾ. ಗಾಯತ್ರಿ ಮಿಸಾಳೆ ಮಾತನಾಡಿ, ತಾಯಿ ಎದೆ ಹಾಲು ಅಗತ್ಯವಿರುವ ನವಜಾತ ಶಿಶುಗಳಿಗೆ ದಾನಿಗಳಿಂದ ಪಡೆದ ತಾಯಂದಿರ ಹಾಲನ್ನು ಶಿಶುಗಳಿಗೆ ನೀಡಲಾಗುತ್ತದೆ. ಈ ಮಹತ್ವದ ಸೇವೆಯನ್ನು ಎಲ್ಲ ತಾಯಂದಿರು ಸದುಪಯೋಗಪಡಿಸಿಕೊಳ್ಳಬೇಕು ಎಂದರು. ತಾಯಂದಿರು ಜಿಲ್ಲಾ ಆಸ್ಪತ್ರೆಯ ದಾತ್ರಿ ಮದರ್ಸ ಮಿಲ್ಕ್ ಬ್ಯಾಂಕ್ ವಿಜಯಪುರಲ್ಲಿ ನೀಡುವಂತೆ ತಿಳಿಸಿದರು. ಯಾವ ತಾಯಿ ಮಗುವಿಗೆ ಪೌಡರ್ ಹಾಲ ಮತ್ತು ಸಕ್ಕರೆ ನೀರನ್ನು ಮಗುವಿಗೆ ನೀಡಬಾರದೆಂದರು.

ಬಾಂಗಿ ಎಜುಕೇಶನ್ ಮತ್ತು ಸೋಷಿಯಲ್ ಟ್ರಸ್ಟ್ ನ ಡಾ. ಮುನೀರ ಭಾಂಗಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಡಾ. ಸೈಯಿದಾಜಿಭಾ ಭಾಂಗಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಕೋಳೂರ, ರೇಖಾ ದಶವಂತ, ಶಂಕರ ಚಲವಾದಿ, ಎನ್. ಆರ್. ಬಾಗವಾನ, ಸುರೇಂದ್ರ ಮಾನಕರ, ಭಾಂಗಿ ನರ್ಸಿಂಗ್, ಡೋಣೂರ, ಕಾಲೇಜಿನ ಜುಬೇರ ಪ್ರಾಂಶುಪಾಲರಾದ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

# ನೇರ ಸಾಲ, ಸಹಾಯಧನಕ್ಕೆ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ವತಿಯಿಂದ 2026–27ನೇ ಸಾಲಿಗೆ ವಿಪ್ರ ಸ್ವ–ಉದ್ಯಮ ನೇರ ಸಾಲ ಯೋಜನೆಯ ಮೂಲಕ ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯದವರು ಸ್ವಯಂ ಉದ್ಯೋಗ ಕೈಗೊಳ್ಳಲು ನೇರವಾಗಿ ಸಾಲ–ಸಹಾಯಧನ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ.

ಈ ಯೋಜನೆಯಡಿ ಗುಡಿ ಕೈಗಾರಿಕೆ, ಸಣ್ಣ ಕೈಗಾರಿಕೆ, ಹೋಟೇಲ್ ಉದ್ಯಮ (ಕ್ಯಾಟರಿಂಗ್). ಅಂಗಡಿ, ಟೈಲ–ರಿಂಗ್, ಟ್ಯಾಕ್ಸಿ ಹಾಗೂ ಹಸು ಸಾಕಾಣಿಕೆಯಂತಹ ಸ್ವಯಂ ಉದ್ಯೋಗ ಕೈಗೊಳ್ಳಲು ಕನಿಷ್ಠ 1 ಲಕ್ಷ ರೂ. ಹಾಗೂ ಗರಿಷ್ಠ 2 ಲಕ್ಷ ರೂ. ಲಕ್ಷ ಆರ್ಥಿಕ ನೆರವು ನೀಡಲಾಗುವುದು.

ಆನ್ ಲೈನ್ ಮುಖಾಂತರ ksbdb.karnataka.gov.in, ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಕೆಗೆ ಆಗಸ್ಟ್ 31 ಕೊನೆಯ ದಿನಾಂಕ. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ : 87622 49230 ಸಂಪರ್ಕಿಸಬಹುದು. ಸ್ಥಳೀಯ ಹಿಂದುಳಿದ ಬ್ರಾಹ್ಮಣ ಸಮುದಾಯದವರು ಇದರ ಸದುಪಯೋಗವನ್ನು ಪಡೆದುಕೊಳ್ಳಬಹುದಾಗಿದೆ ಎಂದು ಅಪರ ಜಿಲ್ಲಾಧಿಕಾ–ರಿಗಳಾದ ಡಾ. ಔದ್ರಾಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕರಪತ್ರ ಬಿಡುಗಡೆ: ಇದೇ ವೇಳೆ ವ್ಯಾಪಕ ಪ್ರಚಾರಕ್ಕಾಗಿ ಕರಪತ್ರಗಳನ್ನು ಪ್ರೊಬೇಷನರಿ ಐಎಎಸ್ ಅಧಿಕಾರಿ ಅಭಿಷೇಕ ಸಾಹೇರಾ, ಎಡಿಸಿ ಡಾ. ಔದ್ರಾಮ, ಬಿಡುಗಡೆಗೊಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಸತೀಶ ಕಾಪಸಿ, ಮಹಾಂತೇಶ ಎಸ್. ಬಾಗೇವಾಡಿ, ಲತಿಫಾ ಎ. ನಗರಕರ, ಆನಂದ ಜೋಶಿ, ಉಲ್ಲಾಸ ಪಾಟೀಲ, ರಾಜೇಂದ್ರ ಜೋಶಿ, ಎಚ್. ಬಿ. ಕುಲಕರ್ಣಿ, ಸುಧೀಂದ್ರ ಕುಲಕರ್ಣಿ, ಎಸ್. ಎಮ್. ದೇಸಾಯಿ ಉಪಸ್ಥಿತರಿದ್ದರು.

# ಯುವನಿಧಿ ಸದ್ಬಳಕೆ ಮಾಡಿಕೊಳ್ಳಲು ತಾಪಂ ಇಒ ಸಲಹೆ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: ವಿದ್ಯಾರ್ಥಿಗಳಿಗೆ ಸರ್ಕಾರವು ಅನುಷ್ಠಾನಗೊಳಿಸುವ ಪಂಚಾ ಗ್ಯಾರಂಟಿ ಯೋಜನೆಗಳಲ್ಲೊಂದಾದ ಯುವನಿಧಿ ಯೋಜನೆಯ ಸದುಪಯೋಗ ಪಡೆದುಕೊಳ್ಳುವಂತರ ಬಸವನಬಾಗೇವಾಡಿ ತಾಪಂ ಕಾರ್ಯನಿರ್ವಾಹಕ ಅಧಿಕಾರಿ ವೆಂಕಟೇಶ ವಂದಾಲ ಹೇಳಿದರು.

ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಹಾಗೂ ಮನಗೂಳಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಯೋಗದಲ್ಲಿ ಜುಲೈ.31ರ ಶುಕ್ರವಾರ ವಿದ್ಯಾರ್ಥಿಗಳಿಗೆ ಯುವನಿಧಿ ಯೋಜನೆ ಅರಿವು ಕಾರ್ಯಕ್ರಮವನ್ನುದ್ದೇಶಿಸಿ ಅವರು ಮಾತನಾಡಿದರು.

ಕರ್ನಾಟಕ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ 'ಯುವನಿಧಿ ಯೋಜನೆ' ಈಗಾಗಲೇ ಸರ್ಕಾರವು ಅನುಷ್ಠಾನಗೊಳಿಸಿದ್ದು. ಈ ಯೋಜನೆಯ ಲಾಭವನ್ನು ವಿದ್ಯಾರ್ಥಿಗಳು ಪಡೆದುಕೊಳ್ಳಬಹುದಾಗಿದೆ ಎಂದರು.

ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಉದ್ಯೋಗ ಅಧಿಕಾರಿ ಮಹೇಶ. ಜೆ. ಮಾಳವಾಡೇಕರ ಮಾತನಾಡಿ, ಯುವನಿಧಿ ಯೋಜನೆಯ ಬಗ್ಗೆ ಸಂಪೂರ್ಣವಾಗಿ ಮಾಹಿತಿಯನ್ನು ವಿದ್ಯಾರ್ಥಿಗಳಿಗೆ ತಿಳಿಸಿದರು.

## ಮನಗೂಳಿಯಲ್ಲಿ ಯುವನಿಧಿ ಅರಿವು ಕಾರ್ಯಕ್ರಮ

ಬಸವನಬಾಗೇವಾಡಿ ತಾಲೂಕಿನ ಪಂಚಗ್ಯಾರಂಟಿ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಮಹಿಬೂಬ ನಾಲ್ಕೋಡಿ ಮಾತನಾಡಿ, ಯುವನಿಧಿ ಯೋಜನೆಯಡಿ ಪದವೀಧರರಿಗೆ 3000 ಮತ್ತು ಡಿಪ್ಲೋಮಾದಾರರಿಗೆ 1500 ಸರಕಾರ ನಿರುದ್ಯೋಗ ಭತ್ಯೆಯನ್ನು 2 ವರ್ಷಗಳವರೆಗೆ ನೀಡುತ್ತಿದೆ. ಬಸವನಬಾಗೇವಾಡಿ ತಾಲೂಕಿನ ವಿದ್ಯಾರ್ಥಿಗಳು ಯುವನಿಧಿ ಯೋಜನೆಗೆ ಇನ್ನು ಹೆಚ್ಚಿನ ಸಂಖ್ಯೆಯಲ್ಲಿ ನೋಂದಾಯಿಸಿ ಈ ಯೋಜನೆಯ ಲಾಭವನ್ನು ಪಡೆಯಬೇಕು ಎಂದರು.

ಕಾರ್ಯಕ್ರಮದಲ್ಲಿ ಎಪಿ.ಎಂ.ಸಿ. ಮಾಜಿ ಅಧ್ಯಕ್ಷರಾದ ವಿಶ್ವನಾಥಗೌಡ ಪಾಟೀಲ್,ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಉಪ ಪ್ರಾಂಶುಪಾಲರಾದ ಜಾಹೀದಾ ಮಕಾನದಾರಉಪನ್ಯಾಸಕಿ ನಂದಿನಿ ಸಿ.ಎಸ್. ಉಪನ್ಯಾಸಕ ಈರಯ್ಯಾ ಮಠಪತಿ ಬಸವನಬಾಗೇವಾಡಿ ತಾಲೂಕಿನ ಪಂಚಗ್ಯಾರಂಟಿ ಸದಸ್ಯರಾದ ಮಾಹಾಂತೇಶ ತಳೆವಾಡ, ಕವಿತಾ ಮಣೂರಮಠ, ಹಾಜಿಸಾಬ ಕೌಲಗಿ ಸೇರಿದಂತೆ ಕಾಲೇಜಿನ ಆಡಳಿತ ಅಧಿಕಾರಿ, ಸಿಬ್ಬಂದಿ ಉಪಸ್ಥಿತರಿದ್ದರು.

# ಆರೋಗ್ಯದ ಬಗ್ಗೆ ಸ್ವಯಂ ಜಾಗೃತರಾಗಿರುವುದು ಒಳಿತು : ಪ್ರೊ.ತೋಳನೂರ

## ತಿಕೋಟಾ ಬಿಎಲ್‌ಡಿಇ ನೂತನ ಕಲಾ ಮಹಾವಿದ್ಯಾಲಯದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ

■ ಉದಯರಶ್ಮಿ ದಿನಪತ್ರಿಕೆ




ತಿಕೋಟಾ: ಪಟ್ಟಣದ ಬಿ.ಎಲ್. ಡಿ. ಇ ಸಂಸ್ಥೆಯ ನೂತನ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯದಲ್ಲಿ ಶನಿವಾರ ಗ್ರಾಮೀಣ ಅಭಿವೃದ್ಧಿ ಸಂಸ್ಥೆ ವಿಜಯಪುರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಜಿಲ್ಲಾ ಪಂಚಾಯತ್ ವಿಜಯಪುರ ಇವರ ಸಹಯೋಗದಲ್ಲಿ ವಿದ್ಯಾರ್ಥಿಗಳಿಗಾಗಿ ಒಂದು ದಿನದ ಉಚಿತ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಅಧ್ಯಕ್ಷತೆಯನ್ನು ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಪ್ರೊ. ಪಿ. ಎಸ್.ತೋಳನೂರ ಅವರು ಮಾತನಾಡಿ, ಪ್ರತಿಯೊಬ್ಬರು ಉತ್ತಮ ಆರೋಗ್ಯ ಹೊಂದುವುದು ಇಂದಿನ ಅಗತ್ಯವಾಗಿದೆ. "ಆರೋಗ್ಯವೇ ಭಾಗ್ಯ" ಅನ್ನುವಂತೆ ಮನುಷ್ಯನಿಗೆ ಯಾವುದೇ ಸಂಪತ್ತು ಇದ್ದರೂ ಆರೋಗ್ಯ ಸಂಪತ್ತು ಅತ್ಯಂತ ಮಹತ್ವವನ್ನು ಪಡೆಯುತ್ತದೆ. ವಿದ್ಯಾರ್ಥಿಗಳಾದವರು ನಿತ್ಯವೂ ಪೌಷ್ಟಿಕಾಂಶ ಆಹಾರವನ್ನು ಸೇವಿಸುವುದರ ಮೂಲಕ ಆರೋಗ್ಯದ ಬಗ್ಗೆ ಸ್ವಯಂ ಜಾಗೃತರಾಗಿರುವುದು ಜೀವನ ಶೈಲಿಯ ಒಂದು ಉತ್ತಮ ಅಂಶವಾಗಿದೆ ಎಂದರು.

ಕಾರಣ ವಿದ್ಯಾರ್ಥಿಗಳು ಭವಿಷ್ಯದಲ್ಲಿ ಉತ್ತಮ ಸಾಧನೆ ಮಾಡಬೇಕಾದರೆ ದೇಹ ಮತ್ತು ಮನಸ್ಸಿನ ಆರೋಗ್ಯವನ್ನು ಚೆನ್ನಾಗಿ ಕಾಪಾಡಿಕೊಳ್ಳುವಂತೆ ಸಲಹೆ ನೀಡಿದರು.

ಇದಕ್ಕೂ ಮುನ್ನ ಐಕ್ಯೂಎಸಿ ಸಂಯೋಜಕ, ಪ್ರೊ.ಬಿ. ಎಸ್.ಬೆಳಗಲಿ ಪ್ರಾಸ್ತಾವಿಕವಾಗಿ ಮಾತನಾಡಿ,

ರಕ್ತಹೀನತೆ ತಡೆಗಟ್ಟಲು ನಿಮ್ಮ ದೈನಂದಿನ ಆಹಾರದಲ್ಲಿ ಕಬ್ಬಿಣಾಂಶ, ವಿಟಮಿನ್ ಬಿ12 ಮತ್ತು ಫೋಲಿಕ್ ಆಮ್ಲವಿರುವ ಪದಾರ್ಥಗಳನ್ನು ಸೇ–ರಿಸಿಕೊಳ್ಳಬೇಕು.ಭಾರತದಲ್ಲಿ ರಾಷ್ಟ್ರೀಯ ಕುಟುಂಬ ಆರೋಗ್ಯ ಸಮೀಕ್ಷೆ (ಓಈಊಖ–5) ಪ್ರಕಾರ, 15 ರಿಂದ 49 ವರ್ಷ ವಯಸ್ಸಿನ ಶೇಕಡಾ 57ರಷ್ಟು ಮಹಿಳೆಯರು,ಅದರಲ್ಲೂ 52.2% ರಷ್ಟು ಗರ್ಭಿಣಿ ಮಹಿಳೆಯರಲ್ಲಿ ಹಿಮೋಗ್ಲೋಬಿನ್ ಕೊರತೆ ಕಂಡುಬಂದಿದೆ. ಶೇಕಡಾ 25ರಷ್ಟು ಪುರುಷರು ರಕ್ತಹೀನತೆಯಿಂದ ಬಳಲುತ್ತಿರುವುದು ಸಮೀಕ್ಷೆಯಿಂದ ತಿಳಿದುಬಂದಿದೆ. ಅದಕ್ಕಾಗಿ ವಿದ್ಯಾರ್ಥಿಗಳು ಪ್ರೋಟೀನ್, ವಿಟಮಿನ್, ಕಬ್ಬಿಣಾಂಶಯುಕ್ತ ಪೌಷ್ಟಿಕಾಂಶ ಇರುವ ಆಹಾರ ಸೇವನೆ ಮಾಡುವುದರ ಮೂಲಕ ರಕ್ತಹೀನತೆಯಿಂದ ದೂರ ಉಳಿಯುವಂತೆ ಕರೆ ನೀಡಿದರು. ಆರೋಗ್ಯ ತಪಾಸಣಾ ಸಂಂ–ಯೋಜಕ ಸಂಗು ಸಜ್ಜನ್ ಅವರು ರಕ್ತಹೀನತೆ ಕುರಿತು ವಿದ್ಯಾರ್ಥಿಗಳಿಗೆ ಉಪಯುಕ್ತ ಮಾಹಿತಿ ತಿಳಿಸಿದರು. ನಂತರ 200 ಕ್ಕೂ ಹೆಚ್ಚು ವಿದ್ಯಾರ್ಥಿ, ವಿದ್ಯಾರ್ಥಿನಿಯರು ಆರೋಗ್ಯ ತಪಾಸಣೆ ಹೊಂದಿದರು. ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಂಶುಪಾಲ ಪ್ರೊ.ಪಿ.ಎಸ್. ತೋಳನೂರ, ಐಕ್ಯೂ ಎಸಿ ಸಂಯೋಜಕ ಪ್ರೊ.ಬಿ. ಎಸ್.ಬೆಳಗಲಿ, ಡಾ.ಎಸ್. ಎನ್.ವಾಘ್ಮೊರೆ, ವೈ.ಆರ್.ಸಿ ಸಂಯೋಜಕ, ಉಪನ್ಯಾಸಕ ಮಂಜುನಾಥ ಕಾಸೆ, ಶಿಬಿರದ ಸಂಯೋಜಕ ಸಂಗು ಸಜ್ಜನ್, ಆರೋಗ್ಯ ತಪಾಸಣಾ ಸಿಬ್ಬಂದಿ, ಕಾಲೇಜಿನ ಪ್ರಾಧ್ಯಾಪಕರು ಹಾಗೂ ವಿದ್ಯಾರ್ಥಿಗಳು ಇದ್ದರು. ಕಾರ್ಯಕ್ರಮದಲ್ಲಿ ಡಾ.ಸಂತೋಷ ನವಲಗುಂದ ನಿರೂಪಿಸಿದರು, ಮಂಜುನಾಥ ಕಾಸೆ ವಂದಿಸಿದರು.

# 16.66 ಲಕ್ಷಕ್ಕೂ ಅಧಿಕ ಗಣತಿ ನಮೂನೆ ಡಿಜಿಟಲೀಕರಣ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ:ಜಿಲ್ಲೆಯಲ್ಲಿನಡೆದಿರುವ ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆಗೆ ಸಂಬಂಧಿಸಿದಂತೆ ಇಲ್ಲಿಯವರೆಗೆ 16,66,882 ಗಣತಿ ನಮೂನೆಗಳನ್ನು ಡಿಜಿಟಲೀಕರಣಗೊಳಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರು ತಿಳಿಸಿದ್ದಾರೆ.

ಆನ್ ಲೈನ್ ನಲ್ಲಿ 4,047 ಮತದಾರರು ಗಣತಿ ನಮೂನೆ ಸಲ್ಲಿಸಿದ್ದಾರೆ. 1,45,162 ಶಾಶ್ವತವಾಗಿ ಸ್ಥಳಾಂತರಗೊಂಡರೆ, 53,588 ಮತದಾರರು ಮರಣ ಹೊಂದಿದ್ದಾರೆ. 61,502 ಮತದಾರರು ಗೈರು–ಸಂಗ್ರಹಿಸಲಾಗದ ಉಳಿದಿದ್ದಾರೆ. 28,496 ಮತದಾರರು ನೋಂದಾಯಿಸಿಕೊಂಡಿದ್ದಾರೆ.

ಮುದ್ದೇಬಿಹಾಳ, ದೇವರ ಹಿಪ್ಪರಗಿ, ಬಸವನ ಬಾಗೇವಾಡಿ, ಬಬಲೇಶ್ವರ, ವಿಜಯಪುರ ನಗರ, ನಾಗಠಾಣ, ಇಂಡಿ ಮತ್ತು ಸಿಂದಗಿ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಬಿ.ಎಲ್.ಓ ಗಳಿಂದ ಪ್ರಕ್ರಿಯೆ ಮುಂದುವರಿದಿದೆ.

ಸಾರ್ವಜನಿಕರು ಮತ್ತು ಮತದಾರರು ಹೆಚ್ಚಿನ ಮಾಹಿತಿಗಾಗಿ ಜಿಲ್ಲೆಯ ಅಧಿಕೃತ ವೆಬ್‌ಸೈಟ್ https://vijayapura.nic.in ಭೇಟಿ ನೀಡಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




# ಉದ್ಯೋಗ ಮೀಸಲಾತಿಗೆ ಆಗ್ರಹಿಸಿ ಬಣಜಿಗ ಸಮಾಜದ ಮನವಿ

■ ಉದಯರಶ್ಮಿ ದಿನಪತ್ರಿಕೆ

ದೇವರಹಿಪ್ಪರಗಿ: ಬಣಜಿಗ ಸಮುದಾಯಕ್ಕೆ ಸರ್ಕಾರ ಪ್ರವರ್ಗ 2ಎ ಅಡಿಯಲ್ಲಿ ಉದ್ಯೋಗ ಮೀಸಲಾತಿ ಪರಿಗಣಿಸಿ ಆದೇಶ ನೀಡಬೇಕು ಎಂದು ಆಗ್ರಹಿಸಿ ಬಣಜಿಗ ಕ್ಷೇಮಾಭಿವೃದ್ಧಿ ಸಂಘದ ತಾಲ್ಲೂಕು ಘಟಕದಿಂದ ತಹಶೀಲ್ದಾರ ನಿಂಗಣ್ಣ ಬಿರಾದಾರ ಅವರಿಗೆ ಮನವಿ ಸಲ್ಲಿಸಲಾಯಿತು.

ಪಟ್ಟಣದ ಮಡಿವಾಳ ಮಾಚಿದೇವ ದೇವಸ್ಥಾನದ ಆವರಣದಲ್ಲಿ ಶನಿವಾರ ಬೆಳಿಗ್ಗೆ ಸಭೆ ಸೇರಿದ ತಾಲ್ಲೂಕು ಬಣಜಿಗ ಸಮುದಾಯದ ಸದಸ್ಯರು ಸಭೆ ಕೈಗೊಂಡು ಮೀಸಲಾತಿ ಚರ್ಚಿಸಿದರು. ನಂತರ ದೇವಸ್ಥಾನದಿಂದ ಮೌನ ಮೆರವಣಿಗೆ ಮೂಲಕ ಹೊರಟು ತಹಶೀಲ್ದಾರ ಕಾರ್ಯಾಲಯ ತಲುಪಿದರು. ಈ ಸಂದರ್ಭದಲ್ಲಿ ಸಮುದಾಯದ ಧುರೀಣ ಜಗದೀಶ ಕಲಬುರ್ಗಿ ಮಾತನಾಡಿ, ನಮ್ಮ ಸಮುದಾಯ ಯಾವುದೇ ಉಗ್ರ ಹೋರಾಟಗಳಲ್ಲಿ ಗುರುತಿಸಿಕೊಳ್ಳದೇ ಶಾಂತಿಯುತ ಮಾರ್ಗ ಅನುಸರಿಸುತ್ತಿದೆ. ಈಗಲೂ ನಾವು ನಮ್ಮ ಬೇಡಿಕೆಯನ್ನು ಸೌಜನ್ಯದಿಂದಲೇ ಕೇಳುತ್ತಿದ್ದೇವೆ. ನಮ್ಮ ಸಮುದಾಯ ಶೈಕ್ಷಣಿಕವಾಗಿ ಹಿಂದುಳಿದಿರುವುದರಿಂದ ಸರ್ಕಾರಿ ನೇಮಕಾತಿಗಳಿಂದ ಅವಕಾಶ ವಂಚಿತವಾಗಿದೆ. ಆದ್ದರಿಂದ ಸಮುದಾಯವನ್ನು 16(4) ಅಡಿಯಲ್ಲಿ ಗ್ರೂಪ್ ಡಿ ಬದಲಿಗೆ ಗ್ರೂಪ್ ಬಿ (2ಎ) ಅಡಿಯಲ್ಲಿ ಮರು ವರ್ಗೀಕರಿಸಿ ಸಾಮಾಜಿಕ ನ್ಯಾಯ ದೊರಕಿಸಿಕೊಡಲು ಆಗ್ರಹಿಸಿ ತಹಶೀಲ್ದಾರರಿಗೆ ಮನವಿ ಸಲ್ಲಿಸಿದರು.

ಸಂಘದ ಅಧ್ಯಕ್ಷ ಬಿ.ಜಿ.ತಾಳಿಕೋಟಿ, ಉಪಾಧ್ಯಕ್ಷ ಶರಣಪ್ಪ ಸಾಲಕ್ಕಿ, ಜಿ.ಎನ್.ಕೋರಿ, ಉಮಾಕಾಂತ ಸೊನ್ನದ, ಆರ್.ಡಿ.ಕೋರಿ, ಕೆ.ಎ.ಸಾಲಕ್ಕಿ, ಯಲಗೂರೇಶ ದೇವೂರ, ಕೆ.ಎಸ್.ಕೋರಿ, ಚೇತನ ಅಡಕಿ, ಕಾಶೀನಾಥ ಕೋರಿ, ಗಂಗಾಧರ ಬಬಲೇಶ್ವರ, ವ್ಹಿ.ಜಿ.ಕೋರಿ, ಮಲ್ಲಿಕಾರ್ಜುನ ಕೋರಿ, ಸಚೀನ ಕೋರಿ, ಪಿ.ಎಸ್.ಪಟ್ಟಣಶೆಟ್ಟಿ, ಮಹೇಶ ಬಬಲೇಶ್ವರ, ವಿಶ್ವನಾಥ ಹೀರಾಪೂರ, ಈರಣ್ಣ ಧುತ್ತರಗಾಂವಿ, ಸುರೇಶ ಅಂಗಡಿ, ಪಿ.ಎಮ್.ಹಂಗರಗಿ, ಸಂಗಮೇಶ ಅಡಕಿ, ಮಲ್ಲಿಕಾರ್ಜುನ ಕೋಳಕೂರ, ಸದಾನಂದ ದೇವೂರ, ರಮೇಶ ಕೋರಿ ಇದ್ದರು.

### ಆಲಮೇಲದಲ್ಲಿ ನಡೆದ ತಾಲ್ಲೂಕು ಬಣಜಿಗ ಸಮಾವೇಶ ಉದ್ಘಾಟಿಸಿದ ಮಾಜಿ ಮುಖ್ಯಮಂತ್ರಿ, ಸಂಸದ ಜಗದೀಶ ಶೆಟ್ಟರ ಸಲಹೆ

# ಆರ್ಥಿಕವಾಗಿ ದುರ್ಬಲರನ್ನು ಗುರುತಿಸಿ ನೆರವು ನೀಡಿ

■ ಉದಯರಶ್ಮಿ ದಿನಪತ್ರಿಕೆ



ಆಲಮೇಲ: ಬಣಜಿಗ ಸಮಾಜದ ಸಂಘಟನೆ ಬಲಿಷ್ಠವಾಗಬೇಕಾದರೆ ಸಮಾಜದ ಎಲ್ಲ ವರ್ಗದವರನ್ನು ಒಗ್ಗೂಡಿಸಿಕೊಂಡು ಸಾಗಬೇಕು. ಶಿಕ್ಷಣ, ಉದ್ಯೋಗ ಹಾಗೂ ಸ್ವಾವಲಂಬನೆಯ ಮೂಲಕ ಯುವಜನತೆ ಮುಂದೆ ಬರಬೇಕು. ಸಮಾಜದ ಅಭಿವೃದ್ಧಿಗೆ ಹಿರಿಯರ ಅನುಭವ ಮತ್ತು ಯುವಕರ ಶಕ್ತಿಯನ್ನು ಸಮರ್ಪಕವಾಗಿ ಬಳಸಿಕೊಳ್ಳಬೇಕು ಎಂದು ಮಾಜಿ ಮುಖ್ಯಮಂತ್ರಿ ಸಂಸದ ಜಗದೀಶ ಶೆಟ್ಟರ ಹೇಳಿದರು.

ಅವರು ಆಲಮೇಲ ಪಟ್ಟಣದ ವಿಶ್ವೇಶ್ವರ ದೇವಸ್ಥಾನದಲ್ಲಿ ನಡೆದ ತಾಲ್ಲೂಕು ಬಣಜಿಗ ಸಮಾವೇಶವನ್ನು ಜ್ಯೋತಿ ಬೆಳಗಿಸಿ ಉದ್ಘಾಟಿಸಿದರು.

ಸಮಾಜದಲ್ಲಿ ಆರ್ಥಿಕವಾಗಿ ಹಿಂದುಳಿದ ಕುಟುಂಬಗಳ ಮಕ್ಕಳ ಶಿಕ್ಷಣಕ್ಕೆ ಆದ್ಯತೆ ನೀಡಬೇಕು. ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡುವ ಮೂಲಕ ಅವರನ್ನು ಉನ್ನತ ಸ್ಥಾನಗಳಿಗೆ ತಲುಪಿಸುವ ಜವಾಬ್ದಾರಿ ಸಮಾಜದ ಮೇಲಿದೆ. ಸಮಾಜದ ಪ್ರತಿಯೊಬ್ಬರೂ ಸೇವಾ ಮನೋಭಾವದಿಂದ ಕಾರ್ಯನಿರ್ವಹಿಸಿದಾಗ ಮಾತ್ರ ನಿಜವಾದ ಅಭಿವೃದ್ಧಿ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಸಮಾಜದ ಸಂಘಟನೆ ಕೇವಲ ಚುನಾವಣೆ ಅಥವಾ ಸಮಾವೇಶಗಳಿಗೆ ಸೀಮಿತವಾಗಬಾರದು. ವರ್ಷಪೂರ್ತಿ ಜನೋಪಯೋಗಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಸದಸ್ಯರಲ್ಲಿ ಪರಸ್ಪರ ಸಹಕಾರ, ವಿಶ್ವಾಸ ಮತ್ತು ಒಗ್ಗಟ್ಟನ್ನು ಬೆಳೆಸಬೇಕು. ಸಮಾಜದ ಪ್ರಗತಿಗಾಗಿ ಎಲ್ಲರೂ ಭಿನ್ನಾಭಿಪ್ರಾಯಗಳನ್ನು ಬದಿಗೊತ್ತಿ ಒಂದೇ ಕುಟುಂಬದಂತೆ ಕೆಲಸ ಮಾಡಬೇಕು ಎಂದು ಕರೆ ನೀಡಿದರು. ಯುವಕರು ಶಿಕ್ಷಣದ ಜೊತೆಗೆ ನಾಯಕತ್ವ ಗುಣಗಳನ್ನು ಬೆಳೆಸಿಕೊಂಡು ಸಮಾಜ ಸೇವೆಯಲ್ಲಿ ತೊಡಗಿಸಿಕೊಳ್ಳಬೇಕು. ಮಹಿಳೆಯರಿಗೆ ಹೆಚ್ಚಿನ ಅವಕಾಶಗಳನ್ನು ಕಲ್ಪಿಸುವ ಮೂಲಕ ಸಮಾಜದ ಸರ್ವಾಂಗೀಣ ಅಭಿವೃದ್ಧಿಗೆ ಒತ್ತು ನೀಡಬೇಕೆಂದು ಅವರು ಹೇಳಿದರು.ಶಾಸಕ ಅಶೋಕ ಮನಗೂಳಿ, ಮಾಜಿ ಸಚಿವ ಅಪ್ಪಾಸಾಹೇಬ ಪಟ್ಟಣಶೆಟ್ಟಿ, ಬಣಜಿಗ ಸಮಾಜ ಸಂಘಟನೆಯ ರಾಜ್ಯ ಉಪಾಧ್ಯಕ್ಷ ಅಂದಪ್ಪ ಜವಳಿ ಮಾತನಾಡಿದರು.ಕಾರ್ಯಕ್ರಮದಲ್ಲಿ ಮಾಜಿ ಶಾಸಕ ರಮೇಶ ಭೂಸನೂರ, ದೊಡ್ಡಪ್ಪಗೌಡ ಪಾಟೀಲ, ಮಾಜಿ ಪರಿಷತ್ ಸದಸ್ಯ ಅರುಣ ಶಹಾಪುರ ವೇದಿಕೆಯಲ್ಲಿದ್ದರು. ಶಂಕರಾರೂಢ ಸ್ವಾಮೀಜಿ, ಚಂದ್ರಶೇಖರ ಶ್ರೀ, ವಿರಕ್ತಮಠದ ಶ್ರೀ, ರಾಂಪೂರಮಠದ ನಿತ್ಯಾನಂದ ಶಿವಯೋಗಿಗಳು ಕಾರ್ಯಕ್ರಮದ ಸಾನಿಧ್ಯವಹಿಸಿದ್ದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ತಾಲ್ಲೂಕು ಅಧ್ಯಕ್ಷ ಸಿದ್ಧಲಿಂಗ ಸುಬೇಧಾರ ವಹಿಸಿದ್ದರು.

ಸಾಹಿತಿ ಅಶೋಕ ಹಂಚಲಿ ಉಪನ್ಯಾಸ ನೀಡಿದರು.ಮಲ್ಲಿಕಾರ್ಜುನ ಜೋಗುರ ಪ್ರಸ್ತಾವಿಕವಾಗಿ ಮಾತನಾಡಿದರು. ಎಸ್ ಎಸ್‌ಎಲ್‌ಸಿ, ಹಾಗೂ ಪಿಯುಸಿಯಲ್ಲಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಗಳಿಗೆ ತಲಾ 2ಸಾವಿರ ರೂ ನಗದು , ಫಲಕ ನೀಡಿ ಗೌರವಿಸಲಾಯಿತು.

ನೂತನ ತಾಲ್ಲೂಕು ಘಟಕ, ಮಹಿಳಾಘಟಕ, ಯುವ ಘಟಕಗಳ ಪದಾಧಿಕಾರಿಗಳ ಪದಗ್ರಹಣ ನಡೆಯಿತು. ಶಿವಶರಣ ಗುಂದಗಿ ಸ್ವಾಗತಿಸಿದರು. ಶ್ರೀಶೈಲ ಮಠಪತಿ ನಿರೂಪಿಸಿದರು. ಶಿವಾನಂದ ಮಾರ್ಸನಳ್ಳಿ ವಂದಿಸಿದರು. ಇದೇ ಸಂದರ್ಭದಲ್ಲಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು, ರೂಪಕಗಳು ಜರುಗಿದವು.

# ಪೋಲೀಸ ನೇಮಕಾತಿ ಪರೀಕ್ಷೆಯಲ್ಲಿ ಗೊಂದಲ :ಗಲಾಟೆ

■ ಉದಯರಶ್ಮಿ ದಿನಪತ್ರಿಕೆ

ತಿಕೋಟಾ: ಪಟ್ಟಣದಲ್ಲಿ ನಡೆದ ಪೋಲೀಸ ಇಲಾಖೆಯ ಹುದ್ದೆಗಳ ನೇಮಕಾತಿ ಪರೀಕ್ಷೆಯಲ್ಲಿ ಶಾರದಾಂಬಾ ಶಿಕ್ಷಣ ಸಂಸ್ಥೆಯಲ್ಲಿ ಓಎಂಆರ್ ಉತ್ತರ ಪತ್ರಿಕೆ ಪ್ರಶ್ನೆ ಪತ್ರಿಕೆ ವಿಳಂಬ ಮಾಡಿ ನೀಡಿದ್ದಕ್ಕೆ ಮತ್ತು ಪ್ರಶ್ನೆ ಪತ್ರಿಕೆ ಉತ್ತರ ಪತ್ರಿಕೆಗೆ ತಾಳೆ ಇಲ್ಲದ್ದಕ್ಕೆ ಪರೀಕ್ಷಾರ್ಥಿಗಳು ಆಕ್ರೋಶ ವ್ಯಕ್ತಪಡಿಸಿದರು. ತಿಕೋಟಾ ಪಟ್ಟಣದ ಶಾರದಾಂಬಾ ಶಿಕ್ಷಣ ಸಂಸ್ಥೆಯಲ್ಲಿ ಪೋಲೀಸ ಇಲಾಖೆಯ ಹುದ್ದೆಗಳ ನೇಮಕಾತಿಯಲ್ಲಿ ಉತ್ತರ ಪತ್ರಿಕೆ ಪ್ರಶ್ನೆ ಪತ್ರಿಕೆ ತಡವಾಗಿ ನೀಡಿದ್ದರಿಂದ ಮತ್ತು ಉತ್ತರ ಮತ್ತು ಪ್ರಶ್ನೆ ಪತ್ರಿಕೆ ಬಾರ್ಕೋಡ ಒಂದೇ ಆಗದೆ ಕೆಲ ವಿಧ್ಯಾರ್ಥಿ/ನೀಯರು ಪ್ರಶ್ನೆ ಉತ್ತರ ಪತ್ರಿಕೆ ಸಮೇತವಾಗಿ ಶಾಲೆ ಹೊರಗಡೆ ಬಂದು ಪೋಲೀಸ ಇಲಾಖೆ ಹಾಗೂ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತ ನಮಗೆ ಅನ್ಯಾಯವಾಗಿದೆಯಂದು ಪ್ರತಿಭಟನೆ ನಡೆಸಿದರು. ಎಸ್.ಪಿ ಲಕ್ಷ್ಮಣ ನಿಂಬರಗಿ ಅವರು ನಿಮಗೆ ಅವಕಾಶ ನೀಡುವುದಾಗಿ ಭರವಸೆ ಕೊಟ್ಟರೂ ಇದಕ್ಕೆ ವಿಧ್ಯಾರ್ಥಿ/ನೀಯರು ಇದಕ್ಕೆ ಒಪ್ಪಲಿಲ್ಲ ಕೆಲವೇ ನಿಮಿಷಗಳಲ್ಲಿ ರೊಚ್ಚಿಗೆದ್ದ ವಿದ್ಯಾರ್ಥಿಗಳು ಕಂಪೌಂಡ ಗೇಟ್ ಮುರಿದು ಒಳಗಡೆ ನುಗ್ಗಲು ಪ್ರಯತ್ನಿಸಿದಾಗ ಪೋಲೀಸರು ಗಲಾಟೆ ಹತೋಟಿಗೆ ತಂದರು.

ಪಾಲಕರು ಮತ್ತು ವಿದ್ಯಾರ್ಥಿಗಳು ರಸ್ತೆ ಮೇಲೆ ಕುಳಿತುಕೊಂಡು ಪ್ರತಿಭಟನೆ ನಡೆಸಿದರು. ನಮ್ಮ ಮಕ್ಕಳ ಭವಿಷ್ಯಕ್ಕೆ ಸರ್ಕಾರವೇ ನೇರ ಹೊಣೆ ಎಂದು ಸಿಟ್ಟನ್ನು ಹೊರ ಹಾಕಿದರು. ಓರ್ವ ವಿದ್ಯಾರ್ಥಿ ಮತ್ತೊಮ್ಮೆ ಪರೀಕ್ಷೆ ನಡೆಸದಿದ್ದರೆ ನಾನು ಜಿಲ್ಲಾಧಿಕಾರಿಗಳ ಕಛೇರಿ ಹತ್ತಿರ ನೇಣು ಬಿಗಿದುಕೊಂಡು ಸಾಯುವುದಾಗಿ ಎಚ್ಚರಿಕೆ ನೀಡಿದನು. ಪರೀಕ್ಷೆ ನಡೆಯುವ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳು ಆಗಮಿಸಿ ಪರೀಕ್ಷೆ ನಡೆಯುವ ಸ್ಥಳಗಳನ್ನು ಪರಿಸೀಲಿಸಿ ಬೆಳಗ್ಗೆ 9:30 ಘಂಟೆಗೆ ಪ್ರಶ್ನೆ ಮತ್ತು ಉತ್ತರ ಪತ್ರಿಕೆ ಕೊಠಡಿಗಳಿಗೆ ತಲುಪಿಸಿದ್ದು ಓಎಂಆರ್ ನಂಬರಕ್ಕೂ ಮತ್ತು ಪ್ರಶ್ನೆ ಪತ್ರಿಕೆ ನಂಬರಕ್ಕೂ ಒಂದಕ್ಕೊಂದು ಹೊಂದಾಣಿಕೆ ಆಗುತ್ತಿಲ್ಲವೆಂದು ವಿದ್ಯಾರ್ಥಿಗಳು ಹೊರಬಂದು ಗಲಾಟೆ ಶುರುಮಾಡಿದ್ದಾರೆ. ಜಿಲ್ಲಾಧಿಕಾರಿಗಳು ಹೇಳುವ ಪ್ರಕಾರ ಓಎಂಆರ್ ಮತ್ತು ಪ್ರಶ್ನೆ ಪತ್ರಿಕೆ ನಂಬರ ಬೇರೆ ಬೇರೆ ಇದ್ದರೂ ಸಹಿತ ಬೇರೆ ಬೇರೆ ಮೆಡಿಸಿನ್ ಕೋಡ ಇರುವುದರಿಂದ ಇರುವ ಓಎಂಆರ್ ನಂಬರನಲ್ಲಿ ನಮೂದು ಮಾಡಿಕೊಂಡು ಪರೀಕ್ಷೆ ಬರೆಯಬಹುದೆಂದು ಹೇಳಿದರು.

115 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಸುರಕ್ಷಿತವಾಗಿ ಪರೀಕ್ಷೆ ಬರೆದರು. 12:30 ಘಂಟೆಗೆ ಮುಗೆಯುವ ಪರೀಕ್ಷೆ ತಡವಾಗಿ ಮುಗಿಸಲಾಯಿತು. ಏನೇ ಗೊಂದಲಗಳಿದ್ದರೂ ಅವುಗಳನ್ನು ಬಗೆ ಹರಿಸಿ ಪರೀಕ್ಷೆ ಬರೆಯಲು ಹೆಚ್ಚಿನ ಕಾಲಾವಕಾಶ ನೀಡಲಾಗಿದೆ ಎಂದು ಜಿಲ್ಲಾಧಿಕಾರಿಗಳು ಹೇಳಿದರು.

### ಬಿಜೆಪಿ ಎಸ್.ಸಿ. ಮೋರ್ಚಾ ರಾಜ್ಯ ಪ್ರಧಾನ ಕಾರ್ಯದರ್ಶಿ ಉಮೇಶ ಕಾರಜೋಳ ಆಗ್ರಹ

# ಪೊಲೀಸ್ ನೇಮಕಾತಿ ಪರೀಕ್ಷೆ ಗೊಂದಲ: ಜೆನ್ ಜೀಗಳೇ ಧ್ವನಿ ಎತ್ತಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜಿಲ್ಲಾ ಉಸ್ತುವಾರಿ ಸಚಿವರು ಪ್ರತಿನಿಧಿಸುವ ತಿಕೋಟಾದಲ್ಲಿ ಪೊಲೀಸ್ ನೇಮಕಾತಿ ಸಂಬಂಧಿಸಿದಂತೆ ಗೊಂದಲ ಎದುರಾಗಿದೆ, ಇದನ್ನು ಪ್ರಶ್ನಿಸಿದ ವಿದ್ಯಾರ್ಥಿಗಳ ಮೇಲೆ ಲಾಠಿ ಪ್ರಹಾರ ನಡೆಸಲಾಗಿದೆ, ವಿದ್ಯಾರ್ಥಿ ಸಮುದಾಯಕ್ಕೆ ಆಗಿರುವ ಅನ್ಯಾಯಕ್ಕೆ ಜಿಲ್ಲಾ ಉಸ್ತುವಾರಿ ಸಚಿವರು ರಾಜಿನಾಮೆ ನೀಡುತ್ತಾರಾ ಅಥವಾ ಮುಖ್ಯಮಂತ್ರಿಗಳು ರಾಜಿನಾಮೆ ನೀಡುತ್ತಾರಾ ಎಂದು ವಿಜಯಪುರದಲ್ಲಿ ಸಾವಯವ ಬೀಜ ಪ್ರಮಾಣನ ಸಂಸ್ಥೆ ಮಾಜಿ ಅಧ್ಯಕ್ಷ ವಿಜುಗೌಡ ಪಾಟೀಲ ಪ್ರಶ್ನಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು,

ನೀಟ್ ವಿದ್ಯಮಾನ ಆಧರಿಸಿ ಕಾಂಗ್ರೆಸ್ ಹಾಗೂ ಕಾಂಗ್ರೆಸ್ ಕೃಪಾಪೋಷಿತ ಕೆಲವು ಸಂಘಟನೆಗಳು ಕೇಂದ್ರ ಶಿಕ್ಷಣ ಸಚಿವರ ರಾಜಿನಾಮೆ ನೀಡುವಂತೆ ಒತ್ತಾಯಿಸಿದವು, ಈ ವಿಷಯದಲ್ಲಿ ನೀವು ಏನು ಮಾಡುತ್ತೀರಿ ಎಂದು ಕಾಂಗ್ರೆಸ್ ನಾಯಕರಿಗೆ ಪ್ರಶ್ನಿಸಿದರು.

ಅಧಿಕಾರಿಗಳು ಕೆಲವರ ಅಣತಿಯಂತೆ ಕಾನೂನು ಮೀರಿ ವರ್ತಿಸಿದ್ದಾರೆ, ಧಾರವಾಡ ಮೊದಲಾದ ಭಾಗಗಳಿಂದ ಬಂದ ವಿದ್ಯಾರ್ಥಿಗಳು ಪ್ರತಿಭಟನೆ ನಡೆಸಿದಾಗ ಅವರ ಮೇಲೆ ಲಾಠಿ ಪ್ರಹಾರ ನಡೆಸಿ, ಬಲವಂತದಿಂದ ಅವರನ್ನು ವಶಕ್ಕೆ ಪಡೆದು ಇನ್ನೊಂದು ಸ್ಥಳಕ್ಕೆ ಬಿಟ್ಟು ಬರಲು ನಿಮಗೆ ಮನಸ್ಸಾದರೂ ಹೇಗೆ ಬಂತು? ವಿದ್ಯಾರ್ಥಿಗಳ ಮೇಲೆ ನಡೆದ ಈ ಗೂಂಡಾಗಿರಿಯನ್ನು ನಾವು ಸಹಿಸುವುದಿಲ್ಲ ಎಂದರು.

ಪೊಲೀಸ್ ನೇಮಕಾತಿಗೆ ಸಂಬಂಧಿಸಿದಂತೆ ಪರೀಕ್ಷೆಯನ್ನು ಪಾರದರ್ಶಕವಾಗಿ ಹಾಗೂ ವ್ಯವಸ್ಥಿತವಾಗಿ ಸಂಘಟಿಸಲು ರಾಜ್ಯ ಸರ್ಕಾರ ಸಂಪೂರ್ಣ ವೈಫಲ್ಯ ಕಂಡಿದೆ, ತಿಕೋಟಾ ಪಟ್ಟಣದ ಶಾರದಾಂಬಾ ಮಹಾವಿದ್ಯಾಲಯದಲ್ಲಿ ನಡೆದ ಗೊಂದಲವೇ ಇದಕ್ಕೆ ನಿದರ್ಶನ.ಪರೀಕ್ಷೆ ಆರಂಭಿಸಲು ವಿಳಂಬ ಹಾಗೂ ಓಎಂಆರ್ ಶೀಟ್ ಬಗ್ಗೆ ಆಗಿರುವ ವ್ಯತ್ಯಾಸದ ಬಗ್ಗೆ ವಿದ್ಯಾರ್ಥಿಗಳು ಪ್ರಶ್ನಿಸಿ ಅಸಮಾಧಾನ ಹೊರಹಾಕಿದರೆ ಅವರ ಮೇಲೆ ಲಾಠಿ ಪ್ರಹಾರ ನಡೆಸಿರುವುದು ಎಷ್ಟು ಸರಿ?

ವಿದ್ಯಾರ್ಥಿಗಳು ಆಗಿರುವ ಅನ್ಯಾಯವನ್ನು ಪರಿಹರಿಸಿ ವಿದ್ಯಾರ್ಥಿಗಳಿಗೆ ಅಭಯ ನೀಡಬೇಕಾದ ಸರ್ಕಾರ ವಿದ್ಯಾರ್ಥಿಗಳ ಮೇಲೆ ಲಾಠಿ ಪ್ರಹಾರ ನಡೆಸಿರುವುದು ಎಷ್ಟು ಸರಿ? ಇದರಲ್ಲಿ ಪೊಲೀಸರು ಮಾನವೀಯತೆ ಹಾಗೂ ನೈತಿಕತೆ ಮೀರಿ ವರ್ತಿಸಿದ್ದಾರೆ ಎಂದು ವಿಜುಗೌಡ ದೂರಿದರು. ಬಬಲೇಶ್ವರ ಬಿಜೆಪಿ ಮಂಡಳ ಅಧ್ಯಕ್ಷ ಸಂತೋಷ ಕುರದಡ್ಡಿ, ಬಸವರಾಜ ಬಿರಾದಾರ, ವಿಜಯ ಜೋಶಿ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

**ಜೆನ್ ಜೀಗಳೇ ಧ್ವನಿ ಎತ್ತಿ**

**ಬಿಜೆಪಿ ಎಸ್.ಸಿ. ಮೋರ್ಚಾ ರಾಜ್ಯ ಪ್ರಧಾನ ಕಾರ್ಯದರ್ಶಿ ಉಮೇಶ ಕಾರಜೋಳ ಮಾತನಾಡಿ, ಪೊಲೀಸ್ ನೇಮಕಾತಿ ವಿಷಯದಲ್ಲಿ ತಿಕೋಟಾ ಮಾತ್ರ ಅಷ್ಟೇ ಅಲ್ಲ ಅನೇಕ ಕಡೆ ಗೊಂದಲವಾಗಿದೆ, ಹೀಗಾಗಿ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ, ಎಲ್ಲ ಸಚಿವರು ರಾಜಿನಾಮೆ ನೀಡಬೇಕು ಎಂದರು.**

**ನೀಟ್ ಪರೀಕ್ಷಾ ಅಕ್ರಮದ ವಿರುದ್ಧ ಹೋರಾಡಿದ ಜೆನ್ ಜೀಗಳು ಈ ಅಕ್ರಮದ ವಿರುದ್ಧ ಹೋರಾಡಬೇಕು, ಇಲ್ಲವಾದರೆ ನೀವು ದೇಶದ್ರೋಹಿಗಳ ಪ್ರಚೋದನೆಯಿಂದ ನವದೆಹಲಿ ಹೋರಾಟದಲ್ಲಿ ಭಾಗಿಯಾಗಿದ್ದೀರಿ ಎಂಬಂತಾಗುತ್ತದೆ, ಪೊಲೀಸ್ ನೇಮಕಾತಿ ಅಕ್ರಮ ಪ್ರಶ್ನಿಸದೇ ಹೋದರೆ ನಿಮ್ಮ ಮೇಲೆ ಆಪಾದನೆ ಬರುತ್ತದೆ ಎಂದರು.**

**ಪೊಲೀಸ್ ನೇಮಕಾತಿ ಪರೀಕ್ಷೆಗೆ ಸಂಬಂಧಿಸಿದಂತೆ ಆಗಿರುವ ಅನ್ಯಾಯದ ವಿರುದ್ಧ ಪ್ರತಿಭಟಿಸಿದ ವಿದ್ಯಾರ್ಥಿಗಳನ್ನು ಕೂಡಲೇ ಬಿಡುಗಡೆಗೊಳಿಸಬೇಕು, ಇಲ್ಲವಾದರೆ ಜಿಲ್ಲಾ ಪೊಲೀಸ್ ಅಧೀಕ್ಷಕ ಕಚೇರಿ ಎದುರು ಧರಣಿ ನಡೆಸಲಾಗುವುದು ಎಂದರು.**

### ವಿಜಯಪುರ ಬಿಜೆಪಿ ಜಿಲ್ಲಾಧ್ಯಕ್ಷ ಗುರುಲಿಂಗಪ್ಪ ಅಂಗಡಿ ಅಭಿಮತ

# ಯಡಿಯೂರಪ್ಪ ಭಗೀರಥ ಪ್ರಯತ್ನದಿಂದ ವಿಮಾನ ನಿಲ್ದಾಣ ನಿರ್ಮಾಣ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ವಿಜಯಪುರ ವಿಮಾನ ನಿಲ್ದಾಣದ ಹಿಂದೆ ಮಾಜಿ ಸಿ.ಎಂ. ಬಿ.ಎಸ್. ಯಡಿಯೂರಪ್ಪ ಅವರ ಭಗೀರಥ ಪ್ರಯತ್ನ ಅಡಗಿದೆ ಹೊರತು ಸಚಿವ ಡಾ.ಎಂ.ಬಿ. ಪಾಟೀಲರ ಭಗೀರಥ ಪ್ರಯತ್ನ ಇಲ್ಲ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಗುರುಲಿಂಗಪ್ಪ ಅಂಗಡಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು,

2009 ರಲ್ಲಿ ಬಿಜೆಪಿ ಸರ್ಕಾರ ಅವಧಿಯಲ್ಲಿ ವಿಮಾನ ನಿಲ್ದಾಣ ಕಾಮಗಾರಿಗೆ ಶಂಕುಸ್ಥಾಪನೆ ನೇರವೇರಿಸಲಾಗಿತ್ತು, 723 ಎಕರೆ ಭೂ ಸ್ವಾಧೀನ ಸೇರಿದಂತೆ ಅನೇಕ ಮಹತ್ವದ ಹೆಜ್ಜೆ ಇರಿಸಿದ್ದು ಬಿಜೆಪಿ. ಇದರಲ್ಲಿ ಬಿ.ಎಸ್. ಯಡಿಯೂರಪ್ಪ ಅವರ ಭಗೀರಥ ಪ್ರಯತ್ನವಿದೆ ಹೊರತು ಸಚಿವ ಡಾ.ಎಂ.ಬಿ. ಪಾಟೀಲರ ಪ್ರಯತ್ನ ಎಳ್ಳಷ್ಟೂ ಇಲ್ಲ.

ಪೂರ್ಣ ಬಹುಮತದೊಂದಿಗೆ ಸಿದ್ಧರಾಮಯ್ಯ ಅವರ ನೇತೃತ್ವದಲ್ಲಿ ಕಾಂಗ್ರೆಸ್ ಸರ್ಕಾರ ರಚನೆಗೊಂಡು, ನಂತರ ಜೆಡಿಎಸ್ ಮೈತ್ರಿಯೊಂದಿಗೆ ಎರಡನೇಯ ಬಾರಿಯೂ ಅಧಿಕಾರ ಗದ್ದುಗೆ ಏರಿದ ಕಾಂಗ್ರೆಸ್ ಆಗ ಏಕೆ ವಿಮಾನ ನಿಲ್ದಾಣ ಪೂರ್ಣಗೊಳಿಸಲಿಲ್ಲ, ಅದನ್ನು ಪೂರ್ಣಗೊಳಿಸಲು ಬಸವರಾಜ ಬೊಮ್ಮಾಯಿ ವಿಶೇಷ ಮುತವರ್ಜಿ ವಹಿಸಿ ಅನುದಾನ ನೀಡಿದ ಪರಿಣಾಮ ವಿಮಾನ ನಿಲ್ದಾಣ ಪೂರ್ಣಗೊಳ್ಳಲು ಸಾಧ್ಯವಾಯಿತು. ಒಂದರ್ಥದಲ್ಲಿ ಮನೆ ಸಿದ್ಧ ಮಾಡಿ, ಕೀಲಿಕೈ ಸಹ ಅವರ ಕೈಗೆ ಕೊಟ್ಟಾಗಿತ್ತು, ಸಣ್ಣ ಕೆಲಸವನ್ನು ಕಾಂಗ್ರೆಸ್ ಮಾಡಿದೆ, ಪರಿಸರ ನಿರಪೇಕ್ಷಣಾ ಪತ್ರ ದೊರಕದ ಕಾರಣ ವಿಮಾನ ನಿಲ್ದಾಣ ಆರಂಭವಾಗಿರಲಿಲ್ಲ, ಈಗ ಎಲ್ಲ ಕಾಮಗಾರಿ ತಮ್ಮ ಲೇಬಲ್ ಅಂಟಿಸಿಕೊಳ್ಳಲು ಮುಂದಾಗಿರುವುದು ಎಷ್ಟು ಸರಿ?

ಬಿ.ಎಸ್. ಯಡಿಯೂರಪ್ಪ ಅವರಿಗೆ ಮುಖ್ಯವಾಗಿ ಈ ಕ್ರೆಡಿಟ್ ದೊರಕಬೇಕು, ಜೊತೆಗೆ ಸಂಸದರಾದ ರಮೇಶ ಜಿಗಜಿಣಗಿ, ಗೋವಿಂದ ಕಾರಜೋಳ ಹಾಗೂ ಮಾಜಿ ಸಿ.ಎಂ. ಬಸವರಾಜ ಬೊಮ್ಮಾಯಿ ಅವರಿಗೆ ಕ್ರೆಡಿಟ್ ಸಲ್ಲಬೇಕು, ಇದು ಬಿಜೆಪಿ ಸರ್ಕಾರಕ್ಕೆ ಕ್ರೆಡಿಟ್ ಸಲ್ಲಬೇಕು, ಆದರೆ ಈಗ ಶಾಸಕ ಯತ್ನಾಳ ಅವರು ಬಿಜೆಪಿಯಲ್ಲಿಲ್ಲ, ಹೀಗಾಗಿ ಪಕ್ಷದ ಕ್ರೆಡಿಟ್ ಅವರಿಗೆ ಸೇರಿಲ್ಲ ಎಂದರು.

ಅಗ್ನಿಶಾಮಕ ವಾಹನ, ಪೂರಕ ಉಪಕರಣ ಖರೀದಿ ಮಾತ್ರ ಕಾಂಗ್ರೆಸ್ ಅವಧಿಯಲ್ಲಿ ಆಗಿದೆ ಎಂದರು.

ನೀರಾವರಿ ವಿಷಯವಾಗಿಯೂ ಸಹ ಡಾಲರ್. ಎಂ.ಬಿ. ಪಾಟೀಲರು ಕ್ರೆಡಿಟ್ ಪಡೆದುಕೊಂಡಿದ್ದಾರೆ, ಕೆರೆ ತುಂಬುವ ಯೋಜನೆ ಅವೈಜ್ಞಾನಿಕ ಎಂದು ಕಾಂಗ್ರೆಸ್ ಸರ್ಕಾರ ಹೇಳಿತ್ತು, ಆದರೆ ಇದನ್ನು ಸಾಧ್ಯವಾಗಿಸಿದ್ದು ಬಿಜೆಪಿ ಸರ್ಕಾರ, ಆದರೂ ಎಲ್ಲ ಶ್ರೇಯಸ್ಸು ತಾವೇ ಪಡೆದುಕೊಂಡರು.

ಮುಖಂಡರಾದ ಸಂಜಯ ಪಾಟೀಲ ಕನಮಡಿ, ಈರಣ್ಣ ರಾವೂರ, ಭೀಮಾಶಂಕರ ಹದನೂರ, ಡಿ.ಜಿ. ಬಿರಾದಾರ, ವಿಜಯ ಜೋಶಿ ಮೊದಲಾದವರು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

# ಸೇವಾ ನಿವೃತ್ತಿ: ಆಯ್.ಎಂ.ಬಾಟಿ ಅಭಿನಂದನಾ ಸಮಾರಂಭ

■ ಉದಯರಶ್ಮಿ ದಿನಪತ್ರಿಕೆ




ಕೊಲ್ಹಾರ: ಪಟ್ಟಣದ ಸರ್ಕಾರಿ ಹೆಣ್ಣು ಮಕ್ಕಳ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸೇವಾ ನಿವೃತ್ತಿ ಹೊಂದಿದ ಹಿರಿಯ ಮುಖ್ಯ ಶಿಕ್ಷಕರಾದ ಆಯ್.ಎಂ. ಬಾಟಿ ಅವರ ಅಭಿನಂದನಾ ಸಮಾರಂಭವನ್ನು ವೈಭವದಿಂದ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಕ್ಷೇತ್ರ ಸಂಪನ್ಮೂಲ ವ್ಯಕ್ತಿ ಬಸವರಾಜ ಅವಟಿ, "ಮಗು, ಪಾಲಕರು ಮತ್ತು ಶಿಕ್ಷಕರು ಸಮನ್ವಯದಿಂದ ಕಾರ್ಯನಿರ್ವಹಿಸಿದಾಗ ಮಾತ್ರ ಶಾಲೆಯ ಅಭಿವೃದ್ಧಿ ಸಾಧ್ಯ. ಆಯ್.ಎಂ. ಬಾಟಿ ಅವರ ಶ್ರದ್ಧೆ ಮತ್ತು ಸಮರ್ಪಣೆಯಿಂದ ಈ ಶಾಲೆ ಜಿಲ್ಲೆಯಲ್ಲಿ ಅತ್ಯುತ್ತಮ ಶಾಲೆಯಾಗಿ ಹೊರಹೊಮ್ಮಿದೆ," ಎಂದು ಪ್ರಶಂಸಿಸಿದರು.

ಅಭಿನಂದನೆ ಸ್ವೀಕರಿಸಿದ ಮುಖ್ಯಶಿಕ್ಷಕ ಆಯ್.ಎಂ. ಬಾಟಿ ಮಾತನಾಡಿ, "ಸರ್ಕಾರಿ ನೌಕರರು ಕರ್ತವ್ಯ ಪ್ರಜ್ಞೆಯನ್ನು ಬೆಳೆಸಿಕೊಂಡು ಸರ್ಕಾರದ ಯೋಜನೆಗಳ ಅನುಷ್ಠಾನದಲ್ಲಿ ಪ್ರಾಮಾಣಿಕತೆ ತೋರಬೇಕು," ಎಂದು ಸಲಹೆ ನೀಡಿದರು.

ದಿಗಂಬರೇಶ್ವರ ಮಠದ ಶ್ರೀ ಕಲ್ಲಿನಾಥ ದೇವರು ಆಶೀರ್ವಚನ ನೀಡಿ, "ಶಿಕ್ಷಕರು ಕೇವಲ ಪಾಠ ಬೋಧನೆಗೆ ಸೀಮಿತವಾಗದೆ, ಮಕ್ಕಳಿಗೆ ಸಂಸ್ಕಾರ ಮತ್ತು ಸಮಾಜಮುಖಿ ಮೌಲ್ಯಗಳನ್ನು ಕಲಿಸುವಲ್ಲಿ ಪ್ರಮುಖ ಪಾತ್ರವಹಿಸಬೇಕು. ಅದರಿಂದಲೇ ಶಿಕ್ಷಕ ವೃತ್ತಿಗೆ ನಿಜವಾದ ಗೌರವ ಸಿಗುತ್ತದೆ," ಎಂದುಹೇಳಿದರು.ಕಾರ್ಯಕ್ರಮವನ್ನುಪಟ್ಟಣಪಂಚಾಯಿತಿ ಅಧ್ಯಕ್ಷ ಚನ್ನಮಲ್ಲಪ್ಪ ಗಿಡ್ಡಪ್ಪಗೋಳ ಉದ್ಘಾಟಿಸಿದರು. ಎಸ್‌ಡಿಎಂಸಿ ಅಧ್ಯಕ್ಷೆ ರೂಪಾ ಗಿಡ್ಡಪ್ಪಗೋಳ ಅಧ್ಯಕ್ಷತೆ ವಹಿಸಿದ್ದರು. ಪ.ಪಂ ಸದಸ್ಯೆ ಲಕ್ಷ್ಮೀಬಾಯಿ ಜಿಡ್ಡಿಬಾಗಿಲು, ಮುಖ್ಯಾಧಿಕಾರಿ ವಿರೇಶ ಹಟ್ಟಿ, ಬ್ಯಾಂಕ್ ಆಫ್ ಇಂಡಿಯಾ ವ್ಯವಸ್ಥಾಪಕ ನೀಲಕಂಠನಾಥ ಸಜ್ಜನ, ಶಿಕ್ಷಣ ಸಂಯೋಜಕ ವಿ.ಎಚ್ ಪುರೋಹಿತ, ಸಮೂಹ ಸಂಪನ್ಮೂಲ ವ್ಯಕ್ತಿಗಳಾದ ಎಸ್ ಎನ್ ತಡಲಗಿ ಹಾಗೂ ಎಸ್.ಎಸ್. ಜಂಗಮಶೆಟ್ಟಿ, ಆನಂದ ಪವಾರ, ದಾನಿಗಳಾದ ಪ್ರಾಣೇಶ್ ಪತ್ತಾರ, ಎಸ್ಡಿಎಂಸಿ ಉಪಾಧ್ಯಕ್ಷ ಪುಂಡಲೀಕ ಬೆಳ್ಳುಬ್ಬಿ, ಸದಸ್ಯರಾದ ಹೊನ್ನಪ್ಪ ಹಡಪದ, ಲಕ್ಷ್ಮಣ ಕುಂಬಾರ, ಹಾಗೂ ದಾನಿಗಳು, ಎಸ್‌ಡಿಎಂಸಿ ಸದಸ್ಯರು, ಪಾಲಕರು, ವಿವಿಧ ಸಂಘಟನೆಗಳ ಮುಖಂಡರು, ವಿದ್ಯಾರ್ಥಿಗಳು ಮತ್ತು ಶಿಕ್ಷಕರು ಹಾಜರಿದ್ದರು.

# ಮೌಲ್ಯಾಧಾರಿತ ಬದುಕಿಗೆ ಶರಣರ ತತ್ವಗಳೇ ದಾರಿದೀಪ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ವಿಜಯಪುರ ಶರಣರ, ಸಂತರ ನಾಡು. ಸಂಸ್ಕೃತಿ, ಸಂಸ್ಕಾರ ಆಚಾರ–ವಿಚಾರಗಳು ನಮ್ಮ ಈ ಮಣ್ಣಿನ ಗುಣ ಧರ್ಮದಲ್ಲಿಯೇ ಅಡಗಿವೆ. 12ನೇ ಶತಮಾನದ ಶರಣರ ಕಾಯಕ ಸಂದೇಶಗಳು ಸಮಾನತೆ, ಕಾಯಕನಿಷ್ಠೆ ಮತ್ತು ಮಾನವೀಯತೆಯ ಮೇಲೆ ಆಧಾರಿತವಾಗಿದ್ದು, ಜಾತಿ ಬೇಧವಿಲ್ಲದೇ ಪ್ರತಿಯೊಬ್ಬರಿಗೂ ಸಮಾನ ಅವಕಾಶವಿರುವ ಸಮಾಜ ನಿರ್ಮಾಣವೇ ಅವರ ಮುಖ್ಯ ಗುರಿಯಾಗಿತ್ತು. ಇಂದು ನಾವೆಲ್ಲರೂ ಮೌಲ್ಯಾಧಾರಿತ ಬದುಕನ್ನು ನಡೆಸಲು ಶರಣರ ಕಾಯಕ ತತ್ವಗಳೇ ದಾರಿದೀಪವಾಗಿವೆ ಎಂದು ನಿಕಟಪೂರ್ವ ಜಿಲ್ಲಾಧ್ಯಕ್ಷರು ಭಾರತೀಯ ಜನತಾಪಕ್ಷ ವಿಜಯಪುರದ ಆರ್.ಎಸ್ ಪಾಟೀಲ ಅಭಿಪ್ರಾಯಪಟ್ಟರು.

ರವಿವಾರ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಭಾಂಗಣದಲ್ಲಿ ಜರುಗಿದ ಗುರುಬಾಯಿ ಬಸನಗೌಡ ಪಾಟೀಲ ದತ್ತಿ, ಡಾ. ರಾಮರಾವ ಮಲ್ಲರಾವ ನಾಡಗೇರ, ದಿ. ಮಲ್ಲಪ್ಪ ರುದ್ರಪ್ಪ ತೋಟದ ದತ್ತಿ, ಲಿಂ.ಅಮರಪ್ಪ ಬಸಪ್ಪ ಸಾಲಕ್ಕಿ ದತ್ತಿ . ದತ್ತಿನಿಧಿಗೋಷ್ಠಿಗಳನ್ನು ಉದ್ಘಾಟಿಸಿ ಮಾತನಾಡಿದ ಅವರು, ದತ್ತಿಗೋಷ್ಠಿಗಳ ಮೂಲಕ ಶರಣರ ಸಂದೇಶಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳೋಣ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವಿಜಯಪುರದ ವಿಶ್ರಾಂತ ಪ್ರಾಚಾರ್ಯರಾದ ಬಿ. ಎಮ್. ಅಜೂರ ಮಾತನಾಡಿ, ಶರಣರ ಸಂದೇಶಗಳು ನಮ್ಮೆಲ್ಲರ ಬಾಳಿಗೆ ಬೆಳಕಾಗಿ ನಿಲ್ಲಬಲ್ಲ ಅನೇಕ ದಿಕ್ಸೂಚಿಂಯಾದ ವಚನಗಳಲ್ಲಿ ಸಾಮಾಜಿಕ ಮತ್ತು ಮಾನವೀಯ ಮೌಲ್ಯಗಳಿದ್ದು ಅದರ ಸಂದೇಶಗಳನ್ನು ಅರಿತು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳೋಣ ಎಂದರು.

"ಶರಣ ಹಡಪದ ಅಪ್ಪಣ್ಣ ಜೀವನ ಪರಿಚಯ" ಎಂಬ ವಿಷಯದ ಕುರಿತು ಪ್ರವಚನಕಾರರಾದ ಸುಖದೇವಿ ಅಲಬಾಳಮಠ ಉಪನ್ಯಾಸ ನೀಡಿದರು. "ಬಸವಾದಿ ಶರಣರ ಕಾಯಕ ತತ್ವ"ಎಂಬ ವಿಷಯದ ಕುರಿತು ಶಿಕ್ಷಕ, ಸಾಹಿತಿ ಬಸವರಾಜ ಹಂಚಲಿ ಮಾತನಾಡಿದರು.

ಬಸವಣ್ಣನ ಸಮಕಾಲೀನ ವಚನಕಾರರಾದ ಅಲ್ಲಮಪ್ರಭು, ಅಕ್ಕಮಹಾದೇವಿ, ಆಯ್ದಕ್ಕಿ ಮಾರಯ್ಯ–ಆಯ್ದಕ್ಕಿ ಲಕ್ಕಮ್ಮ, ಜೇಡರ ದಾಸಿಮಯ್ಯ, ಮಡಿವಾಳ ಮಾಚಿದೇವ, ಚನ್ನಬಸವಣ್ಣ, ಅಂಬಿಗೇರ ಚೌಡಯ್ಯ. ಸೂಳೆ ಸಂಕವ್ವೆ, ಹಡಪದ ಅಪ್ಪಣ್ಣ, ಶರಣೆ ಲಿಂಗಮ್ಮ ಹೀಗೆ ಅನೇಕ ಶರಣ–ಶರಣೆಯರು ಈ ಸಮಾಜಕ್ಕೆ ನೀಡಿದ ಕಾಯಕ ಸಂದೇಶಗಳನ್ನು ಕುರಿತು ಎಳೆಎಳೆಯಾಗಿ ಬಿಚ್ಚಿಟ್ಟರು.

ಗಂಗಾಧರ ಸಾಲಕ್ಕಿ. ಸಿದ್ರಾಮಪ್ಪ ತೋಟದ. ಎಸ್ ವಿ ಬುರ್ಲಿ ಮಾತನಾಡಿದರು. ದತ್ತಿ ಸಂಚಾಲಕ ಅರ್ಜುನ ಶಿರೂರ ವೇದಿಕೆಯ ಮೇಲಿದ್ದರು.

ತಿಗಣಿಬಿದರಿ ತಾಯಂದಿರು ಪ್ರಾರ್ಥಿಸಿದರು. ಪರವೀನ ಶೇಖ್ ಸ್ವಾಗತಿಸಿ ಗೌರವಿಸಿದರು. ಡಾ.ಆನಂದ ಕುಲಕರ್ಣಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಶಿಲ್ಪಾ ಭಸ್ಮೆ ನಿರೂಪಿಸಿದರು. ಶೋಭಾ ಬಡಿಗೇರ ವಂದಿಸಿದರು. ಜಿಲ್ಲಾ ಕಸಾಪ ಸಂಚಾಲಕ ಅರ್ಜುನ ಶಿರೂರ ವೇದಿಕೆಯ ಮೇಲಿದ್ದರು. ಕಾರ್ಯಕ್ರಮದಲ್ಲಿ ಜಿಲ್ಲಾಧ್ಯಕ್ಷ ಹಾಸಿಂಪೀರ ವಾಲಿಕಾರ, ಜಿ.ಎಸ್.ಬಳ್ಳೂರ, ರವಿ ಕಿತ್ತೂರ, ಮಹೆತಾಬ ಕಾಗವಾಡ, ಶ್ರೀಕಾಂತ ನಾಡಗೌಡ, ರಾಜಶೇಖರ ಕಂಬಾರ, ಸಿದ್ರಾಮಪ್ಪ ಜಂಗಮಶೆಟ್ಟಿ, ಮಹಾದೇವಿ ತೆಲಗಿ ಮುಂತಾದವರು ಉಪಸ್ಥಿತರಿದ್ದರು.

# ಸಚಿವ ಸವದಿ ಗೆ ಮುಖಂಡ ಮಲ್ಲಣ್ಣ ಮನಗೂಳಿ ಅಭಿನಂದನೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ರಾಜ್ಯ ಸಚಿವ ಸಂಪುಟದ ನೂತನ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ ಅಥ–ಣಿ ಶಾಸಕ ಲಕ್ಷ್ಮಣ ಸವದಿ ಅವ–ರಿಗೆ ಸಿಂದಗಿ ತಾಲೂಕು ಗಾಣಿಗ ಸಮಾಜದ ಮಾಜಿ ಅಧ್ಯಕ್ಷ ಮಲ್ಲಣ್ಣ ಮನಗೂಳಿ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

ಮಾನ್ಯ ಲಕ್ಷ್ಮಣ ಸವದಿ ಅವರ ರಾಜಕೀಯ ಮುತ್ಸದ್ದಿತನ ಹಾಗೂ ಜನಪರ ದೃಷ್ಟಿಕೋನವು ರಾಜ್ಯದ ಸಮಗ್ರ ಪ್ರಗತಿಗೆ ಸಾಕ್ಷಿಯಾಗಲಿದೆ. ಅವರ ಸಚಿವ ಅವಧಿಯಲ್ಲಿ ಹಿಂದುಳಿದ ವರ್ಗಗಳ ಏಳಿಗೆ ಹಾಗೂ ಉತ್ತರ ಕರ್ನಾಟಕ ಭಾಗದ ನನೆಗುದಿಗೆ ಬಿದ್ದಿರುವ ನೀರಾವರಿ ಸೇರಿದಂತೆ ಹಲವು ಪ್ರಮುಖ ಅಭಿವೃದ್ಧಿ ಯೋಜನೆಗಳಿಗೆ ಹೊಸ ವೇಗ ಸಿಗಲಿದೆ ಎಂಬ ಸಂಪೂರ್ಣ ವಿಶ್ವಾಸ ನಮಗಿದೆ. ಭಗವಂತನು ಅವರಿಗೆ ಸಾರ್ವಜನಿಕ ಸೇವೆ ಮಾಡಲು ಹೆಚ್ಚಿನ ಶಕ್ತಿಯನ್ನು ಕರುಣಿಸಲಿ" ಎಂದು ಮನಗೂಳಿ ಶುಭ ಹಾರೈಸಿದ್ದಾರೆ.

# ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಅಖಿಲ ಭಾರತ ವೀರಶೈವ ಲಿಮಗಾಯತ ಮಹಾಸಭಾ ಜಿಲ್ಲಾ ಘಟಕ ವಿಜಯಪುರದಿಂದ 2025–26ನೇ ಸಾಲಿನಲ್ಲಿ ಜಿಲ್ಲೆಯಲ್ಲಿ ವ್ಯಾಸಂಗ ಮಾಡಿ ಪದವಿ ಪರೀಕ್ಷೆಯಲ್ಲಿ ಗ–ರಿಷ್ಠ ಅಂಕ ಪಡೆದು ಪಾಸಾದ ವೀರಶೈವ ಲಿಂಗಾಯತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡುವುದಕ್ಕಾಗಿ ಅರ್ಜಿ ಅಹ್ವಾನಿಸಲಾಗಿದೆ. ಅರ್ಜಿದಾರರು ಬಿ.ಎ., ಬಿ.ಕಾಂ, ಬಿ.ಎಸ್.ಸಿ., ಬಿ.ಎ.ಎಂ.ಎಸ್. ಬಿ.ಬಿ.ಎ. ಬಿ.ಸಿ.ಎ. ಬಿ.ಎಸ್.ಸಿ. ನರ್ಸಿಂಗ್ ಬಿ. ಫಾರ್ಮಸಿ, ಎಲ್.ಎಲ್.ಬಿ. ಪದವಿ ಪಾಸಾದವರಾಗಿರಬೇಕು.

ವಿದ್ಯಾರ್ಥಿ ವಿಜಯಪುರ ಜಿಲ್ಲೆಯವರಾಗಿದ್ದು, ಜಿಲ್ಲೆಯ ಯಾವುದೇ ಕಾಲೇಜಿನಿಂದ ಪದವಿ ಪಡೆದವರಾಗಿರಬೇಕು. ಪ್ರತಿ ವಿಭಾಗದಲ್ಲಿ ಗರಿಷ್ಠ ಅಂಕ ಪಡೆದ ವಿದ್ಯಾರ್ಥಿಯನ್ನು ಪುರಸ್ಕಾರಕ್ಕಾಗಿ ಆಯ್ಕೆ ಮಾಡಲಾಗುವುದು. ಸ್ವವಿವರ ಅರ್ಜಿಯೊಂದಿಗೆ ಆಧಾರ ಕಾರ್ಡ ಹಾಗೂ ದೃಢೀಕರಿಸಲ್ಪಟ್ಟ ಪದವಿ ಅಂಕಪಟ್ಟಿಯನ್ನು ಲಗತ್ತಿಸಿ, ದಿನಾಂಕ 20–8–2026 ರೊಳಗೆ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಜಿಲ್ಲಾ ಘಟಕ ಬಂಜಾರಾ ಹೈಸ್ಕೂಲ ಎದುರು ವಿಜಯಪುರ 586103 ಈ ವಿಳಾಸಕ್ಕೆ ಕಳಿಸಿ ಕೊಡಲು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಜಿಲ್ಲಾಧ್ಯಕ್ಷರಾದ ವಿ.ಸಿ. ನಾಗಠಾಣ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಮೊ. 9900582517, 9448279250 ಸಂಪರ್ಕಿಸಲು ಕೋರಲಾಗಿದೆ.

# ಮುಳಸಾವಳಗಿ ಜಾತ್ರೆ: ಕಬಡ್ಡಿ ಪಂದ್ಯಾವಳಿ ಉದ್ಘಾಟನೆ



■ ಉದಯರಶ್ಮಿ ದಿನಪತ್ರಿಕೆ

ದೇವರಹಿಪ್ಪರಗಿ: ದೇಶಿಯ ಕ್ರೀಡೆಗಳನ್ನು ಉಳಿಸಿ ಬೆಳೆಸುವ ಕಾರ್ಯದಲ್ಲಿ ಗ್ರಾಮಸ್ಥರು ಪ್ರತಿವರ್ಷ ಕಬಡ್ಡಿ ಪಂದ್ಯಾವಳಿ ಆಯೋಜಿಸುತ್ತಿರುವುದು ಶ್ಲಾಘನೀಯ ಎಂದು ತಹಶೀಲ್ದಾರ ನಿಂಗಣ್ಣ ಬಿರಾದಾರ ಹೇಳಿದರು.

ತಾಲ್ಲೂಕಿನ ಮುಳಸಾವಳಗಿ ಗ್ರಾಮದ ಹಜರತ್ ಮತಾಬಷಹೀದ ಜಾತ್ರಾ ಮಹೋತ್ಸವದ ಅಂಗವಾಗಿ ಇತ್ತೀಚಿಗೆ ಜರುಗಿದ ಕಬಡ್ಡಿ ಪಂದ್ಯಾವಳಿ ಉದ್ಘಾಟಿಸಿ ಮಾತನಾಡಿದರು.

ಗ್ರಾಮದ ಸಮುದಾಯಗಳು ಅತ್ಯಂತ ಅನ್ಯೋನ್ಯತೆಯಿಂದ ಸೇರಿ ಮೂರು ದಿನಗಳ ಕಾಲ ಜಾತ್ರೆಯನ್ನು ಮಾಡುತ್ತಿರುವುದು ಸರ್ವರಿಗೂ ಮಾದರಿ ಎಂದರು.

ಸ್ಥಳೀಯ ಪಿಕೆಪಿಎಸ್ ಅಧ್ಯಕ್ಷ ಸಂಗನಗೌಡ ಬಿರಾದಾರ, ಭೂ ನ್ಯಾಯ ಮಂಡಳಿಯ ಸದಸ್ಯ ಸಾಯಬಣ್ಣ ಸೊನ್ನಳ್ಳಿ, ಶರಣಗೌಡ ಪಾಟೀಲ, ಗುರುರಾಜ ಆಕಳವಾಡಿ, ಪ್ರೌಢಶಾಲಾ ಶಿಕ್ಷಕ ಎ.ಎಸ್. ವಾಲೀಕಾರ ಮಾತನಾಡಿದರು.

ಪಾರಿತೋಷಕ ಪ್ರಾಯೋಜಕರಾದ ಬಸನಗೌಡ ಪಾಟೀಲ, ನಿಂಗನಗೌಡ ಪ್ರಭುಗೋಳ, ಮೈಬೂಬ ಮಕಾನದಾರ, ಡಿಸಿಸಿ ಬ್ಯಾಂಕಿನ ಮಾಜಿ ನಿರ್ದೇಶಕ ತಿಪ್ಪಣ್ಣ ಮೂಲಿಮನಿ, ಸುರೇಶ ಗುದ್ದಿ, ಎಸ್.ಬಿ.ಬಿರಾದಾರ, ಶರಣಪ್ಪ ತಳವಾರ, ಡಾ.ಬಿ. ಎಸ್.ನಾಯ್ಕೋಡಿ, ಕಲ್ಲಪ್ಪ ರೋಡಗಿ, ಮಲಕು ಸುರಗಿಹಳ್ಳಿ, ದಾವಲಸಾಬ ಗಂಗೂರ, ರಮೇಶ ಹಿರೇಮಠ, ಬಾಪುಗೌಡ ಪಾಟೀಲ, ನಾನಾಗೌಡ ಬಿರಾದಾರ, ಹಸನ ಇನಾಮದಾರ, ಜಾಕೀರ ಮುಜಾವರ, ಈರಣ್ಣ ನಾಯ್ಕೋಡಿ, ಮನೋಹರ ಪೂಜಾರಿ, ಅರವಿಂದ ನಾಯ್ಕೋಡಿ, ಸೋಮಶೇಖರ ಹದರಿ, ದಶರಥ ನಾಯ್ಕೋಡಿ, ಯಲ್ಲಾಲಿಂಗ ಪೂಜಾರಿ, ರಫೀಕ ಗಂಗೂರ ಇದ್ದರು.

# ಕುಡಿಯುವ ನೀರು ಪೂರೈಕೆಯಲ್ಲಿ ವ್ಯತ್ಯಯ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರಕ್ಕೆ ಕುಡಿಯುವ ನೀರು ಸರಬರಾಜು ಮಾಡುವ ಪ್ರಮುಖ ಕೊಳವೆ ಮಾರ್ಗದಲ್ಲಿ ಏಕಾಏಕಿ ಸೋರಿಕೆ ಉಂಟಾಗಿರುವ ಹಿನ್ನೆಲೆಯಲ್ಲಿ, ನಗರದ ಹಲವು ಪ್ರದೇಶಗಳಲ್ಲಿ ಆಗಸ್ಟ್ 3) ಮತ್ತು 4 ರಂದು ಕುಡಿಯುವ ನೀರು ಪೂರೈಕೆಯಲ್ಲಿ ವ್ಯತ್ಯಯವಾಗಲಿದೆ.

ಕೋಲಾರ ಮೂಲ ಸ್ಥಾವರದಿಂದ ಜಲನಗರ ಪಂಪ್‌ಹೌಸ್‌ಗೆ ನೀರು ತಲುಪಿಸುವ 965/900 ಎಂ. ಎಂ. ವ್ಯಾಸದ ಮುಖ್ಯ ಏರು ಕೊಳವೆ ಮಾರ್ಗದ ಶುದ್ಧ ನೀರೆತ್ತುವ ಪಂಪ್‌ಹೌಸ್ ಹತ್ತಿರ ಹಾಗೂ ವಿವಿಧ ಸ್ಥಳಗಳಲ್ಲಿ ಆಗಸ್ಟ್ 03 ರಂದು ಕೊಳವೆ ಮಾರ್ಗ ಹಾನಿ ಆಗಿದೆ.

ಈ ನೀರು ಸೋರಿಕೆ ತಡೆಯಲು ಜಲಮಂಡಳಿ ವತಿಯಿಂದ ತಕ್ಷಣವೇ ತುರ್ತು ದುರಸ್ತಿ ಕಾಮಗಾ–ರಿಯನ್ನು ಕೈಗೆತ್ತಿಕೊಳ್ಳಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಕೋಲಾರ ಶುದ್ಧ ಕುಡಿಯುವ ನೀರಿನ ಘಟಕದಿಂದ ನೀರು ಪಡೆಯುವ ನಗರದ ಪ್ರದೇಶಗಳಿಗೆ ಆಗಸ್ಟ್ 3 ಮತ್ತು 4 ರಂದು ನೀರು ಸರಬರಾಜುವಿನಲ್ಲಿ ವ್ಯತ್ಯಯ ಉಂಟಾಗಲಿದ್ದು, ಸಾರ್ವಜನಿಕರು ಜಲಮಂಡಳಿಯೊಂದಿಗೆ ಸಹಕರಿಸಬೇಕು ಎಂದು ಪ್ರಕಟಣೆ ತಿಳಿಸಿದೆ.


ಕ್ರಿಮಿನಲ್ ಮಿಸ್ಸಲೇನಿಯಸ್ ನಂ. 487/2026

**ಮೆ॥ ಪ್ರಥಮ ವರ್ಗ ನ್ಯಾಯಿಕ ದಂಡಾಧಿಕಾರಿಗಳು (ಕಿ.ಶ್ರೇ) ಮುದ್ದೇಬಿಹಾಳ ಇವರ ನ್ಯಾಯಾಲಯದಲ್ಲಿ**

1. ಸರೋಜಿನಿ ತಂ. ಚಂದ್ರಪ್ಪ ಗೋನಾಳ — ಅರ್ಜಿದಾರಳು

ವಿರುದ್ಧ

1. ಮೆ॥ ಜನನ ಮತ್ತು ಮರಣ ನೋಂದಣಿ ಅಧಿಕಾರಿಗಳು
ತಹಸಿಲ್ದಾರ ಕಾರ್ಯಾಲಯ ಮುದ್ದೇಬಿಹಾಳ,
ತಾ॥ ಮುದ್ದೇಬಿಹಾಳ. — ಎದುರುದಾರರು.

**ಜಾಹೀರ ಪ್ರಕಟಣೆ**

ಈ ಮೂಲಕ ಸಂಬಂಧಪಟ್ಟ ಯಾವತ್ತೂ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ–

ಮೇಲ್ಕಾಣಿಸಿದ ಅರ್ಜಿದಾರಳ ಗಂಡನಾದ **ಶಿವಪ್ಪ ತಂ. ಬಸಪ್ಪ ಮಾದರ** ಇವರು ದಿನಾಂಕ: **25–08–2023** ರಂದು ಮುದ್ದೇಬಿಹಾಳ ತಾಲೂಕ ಪೈಕಿ ಬಿದರಕುಂದಿ ಗ್ರಾಮದಲ್ಲಿ ಮೃತವಾಗಿರುತ್ತಾನೆ, ಸದರಿ ಮೃತನಿಗೆ ಸಂಬಂಧಿಸಿದ ಸೂಕ್ತ ದಾಖಲಾತಿ ಎದುರುದಾರರ ಕಾರ್ಯಾಲಯದಲ್ಲಿ ಅಲಭ್ಯವಿದ್ದ ಕಾರಣ ಎದುರುದಾರರ ವಿರುದ್ಧ ಮೃತನ ಮರಣ ಪ್ರಮಾಣ ಪತ್ರವನ್ನು ಪಡೆದುಕೊಳ್ಳಲು ಆದೇಶವಾಗುವಂತೆ ಮೆ॥ ನ್ಯಾಯಾಲಯದಲ್ಲಿ ಅರ್ಜಿ ದಾಖಲಿಸಿರುತ್ತಾರೆ. ಕಾರಣ ಯಾವತ್ತೂ ಸಾರ್ವಜನಿಕರಿಗೆ ಈ ಮೂಲಕ ತಿಳಿಸುವುದೇನೆಂದರೆ:–

ಮೇಲ್ಕಾಣಿಸಿದ ವಿಷಯಕ್ಕೆ ಸಂಬಂಧಿಸಿದಂತೆ ಯಾರಾದರೂ ಆಸಕ್ತಿವುಳ್ಳವರು ಆ ಕುರಿತು ತಂಟೆ ತಕರಾರರು ಸಲ್ಲಿಸುವವರು ಇದ್ದರೆ ದಿನಾಂಕ: **06–11–2026** ರಂದು ಸ್ವತ ತಾವಗಲಿ ಅಥವಾ ತಮ್ಮಿಂದ ಅಧಿಕಾರ ಪಡೆದ ವಕೀಲರ ಮುಖಾಂತರವಾಗಲಿ ಮೆ॥ ನ್ಯಾಯಾಲಯಕ್ಕೆ ಹಾಜರಾಗಿ ತಮ್ಮ ತಕರಾರು ವಗ್ಯೆರೆ ಇದ್ದಲ್ಲಿ ಸಲ್ಲಿಸಬೇಕು. ಅದಕ್ಕೆ ತಪ್ಪಿದಲ್ಲಿ ತಮ್ಮ ಅನುಪಸ್ಥಿತಿಯಲ್ಲಿ ಮುಂದಿನ ಆದೇಶ ಮಾಡಲಾಗುವುದು ಅಂತಾ ಕೊಟ್ಟ ಸಾರ್ವಜನಿಕ ನೋಟಿಸು.

ಈ ದಿನ ದಿನಾಂಕ **28–07–2026** ರಂದು ನ್ಯಾಯಾಲಯದ ಮೋಹರಿನೊಂದಿಗೆ ನೀಡಲಾಗಿದೆ.

**ನ್ಯಾಯಾಲಯದ ಆದೇಶದ ಮೇರೆಗೆ**

ಸಹಿ/–
**ಎಸ್.ಎಚ್.ಚಳ್ಳಗಿ**
**ವಕೀಲರು, ಮುದ್ದೇಬಿಹಾಳ**

ಸಹಿ/–
**ಶಿರಸ್ತೇದಾರರು**
**ಜೆ.ಎಂ.ಎಫ್.ಸಿ. ನ್ಯಾಯಾಲಯ ಮುದ್ದೇಬಿಹಾಳ**


# ಶೈಕ್ಷಣಿಕ ಶ್ರೇಷ್ಠತೆ ಸಾಧಿಸಲು ಬದ್ಧತೆಯಿಂದ ಅಭ್ಯಸಿಸಿ : ಜನವಾಡ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ವಿದ್ಯಾರ್ಥಿಗಳು ಏಕಾಗ್ರತೆ, ಶಿಸ್ತು ಹಾಗೂ ನಿರಂತರವಾಗಿ ಅಧ್ಯಯನಶೀಲರಾದರೆ ಯಾವುದೇ ಕಠಿಣ ಪರೀಕ್ಷೆಗಳಲ್ಲಿಯೂ ಯಶಸ್ವಿಯಾಗಬಹುದು ಎಂದು ಬಿ.ಎಲ್.ಡಿ.ಇ ಸಂಸ್ಥೆಯ ಹಣಕಾಸು ಉಪಅಧಿಕಾರಿ ಯಲ್ಲಾಲಿಂಗ ಜನವಾಡ ಹೇಳಿದ್ದಾರೆ.

ಶುಕ್ರವಾರ ನಗರದ ಬಿ.ಎಲ್.ಡಿ.ಇ ಸಂಸ್ಥೆಯ ಶ್ರೀ ಬಿ. ಎಂ. ಪಾಟೀಲ ಪಿಯು ಕಾಲೇಜ ಮತ್ತು ಅಲೆನ್ ಕ–ರಿಯರ್ ಇನ್‌ಸ್ಟಿಟ್ಯೂಟ್ ವತಿಯಿಂದ ಆಯೋಜಿಸಲಾದ ನೂತನ ವಿದ್ಯಾರ್ಥಿಗಳ ಸ್ವಾಗತ ಹಾಗೂ ನೀಟ್–2026ರ ಸಾದಕರಿಗೆ ಸನ್ಮಾನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಶೈಕ್ಷಣಿಕವಾಗಿ ಶ್ರೇಷ್ಠತೆಯನ್ನು ಸಾಧಿಸಲು ಎಲ್ಲರೂ ಬದ್ಧತೆಯಿಂದ ವಿದ್ಯಾಭ್ಯಾಸ ಮಾಡಬೇಕು. ಸಮರ್ಪಣೆ, ಕಠಿಣ ಪರಿಶ್ರಮ ಮಾಡುವುದು ಅಗತ್ಯವಾಗಿದೆ ಎಂದು ಅವರು ಹೇಳಿದರು.

ಅಲೆನ್ ಕರಿಯರ್ ಇನಸ್ಟಿಟ್ಯೂಟ್ ಸಂಯೋಜ–ಕ ಪ್ರೇಮ ಕಿಶೋರ ಚೌಧರಿ ಅವರು ಸಾಧಕರಿಗೆ ಬೆಳ್ಳಿ ಪದಕಗಳನ್ನು ನೀಡಿ ಗೌರವಿಸಿ ಮಾತನಾಡಿ, ಕಳೆದ ವರ್ಷ ಅಲೆನ್–ಬಿ.ಎಲ್.ಡಿ.ಇ ಸಂಸ್ಥೆಯಲ್ಲಿ ತರಬೇತಿ ಪಡೆದ ಬಹುತೇಕ ಎಲ್ಲಾ ವಿದ್ಯಾರ್ಥಿಗಳು ನೀಟ್ ಪರೀಕ್ಷೆಯಲ್ಲಿ ಪಾಸಾಗಿ ಯಶಸ್ವಿಯಾಗಿ ಅರ್ಹತೆ ಪಡೆದಿದ್ದಾರೆ. ಇದು ಸಂಸ್ಥೆಯ ಸ್ಥಿರ ಶೈಕ್ಷಣಿಕ ಶ್ರೇಷ್ಠತೆಯನ್ನು ಪ್ರತಿಬಿಂಬಿಸುತ್ತದೆ ಎಂದು ಹೇಳಿದರು.

ಇದೇ ವೇಳೆ ನೀಟ್ ಸಾಧಕರು ತಮ್ಮ ತಯಾರಿ ತಂತ್ರಗಳು, ಅಧ್ಯಯನ ತಂತ್ರಗಳು, ಸಮಯ ನಿರ್ವಹಣಾ ಕೌಶಲ್ಯಗಳು ಮತ್ತು ವೈಯಕ್ತಿಕ ಅನುಭವಗಳನ್ನು ಹಂಚಿಕೊಂಡರು. ಕಿರಿಯರು ತಮ್ಮ ಗುರಿಗಳನ್ನು ಆತ್ಮವಿಶ್ವಾಸ ಮತ್ತು ದೃಢನಿಶ್ಚಯದಿಂದ ಅನುಸರಿಸಬೇಕು ಎಂದು ಪ್ರಥಮ ಪಿಯುಸಿ ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಹೊಸದಾಗಿ ಪ್ರವೇಶ ಪಡೆದ ವಿದ್ಯಾರ್ಥಿಗಳು ಸಂಗೀತ, ನೃತ್ಯ ಮತ್ತು ಇತರ ಪ್ರದರ್ಶನ ನೀಡಿದರು.

ಈ ಸಂದರ್ಭದಲ್ಲಿ ಶ್ರೀ ಬಿ. ಎಂ. ಪಾಟೀಲ ಪಿಯು ಕಾಲೇಜಿನ ಪ್ರಾಂಶುಪಾಲ ಬೊಡ್ಡು ಮಹೇಶ್ವರರಾವ, ಕಾಲೇಜಿನ ಸಂಯೋಜಕಿ ಡಾ. ಮುಕ್ತಾ ಬನ್ನೂರ ಮುಂತಾದವರು ಉಪಸ್ಥಿತರಿದ್ದರು.

# ಪ್ರವಾಹ ಪೀಡಿತ ಗ್ರಾಮಗಳಿಗೆ ತಹಶೀಲ್ದಾರ್ ನಾಗೇಂದ್ರ ಭೇಟಿ

■ ಉದಯರಶ್ಮಿ ದಿನಪತ್ರಿಕೆ



ಇಂಡಿ: ಮಹಾರಾಷ್ಟ್ರ ರಾಜ್ಯದಲ್ಲಿ ಸುರಿಯುತ್ತಿರುವ ಮಳೆಯಿಂದಾಗಿ ತಾಲೂಕಿನ ಭೀಮಾ ನದಿಗೆ ಅಪಾರ ಪ್ರಮಾಣದ ನೀರು ಹರಿದು ಬರುತ್ತಿದೆ. ನದಿಯ ನೀರಿನ ಮಟ್ಟದಲ್ಲಿ ಗಣನೀಯ ಏರಿಕೆಯಾಗಿರುವ ಹಿನ್ನೆಲೆಯಲ್ಲಿ, ಮುಂಜಾಗ್ರತಾ ಕ್ರಮವಾಗಿ ಇಂಡಿ ತಾಲೂಕು ಆಡಳಿತವು ನದಿ ತೀರದ ಗ್ರಾಮಗಳಲ್ಲಿ ಘೋಷಿಸಿದೆ.

ಸಾರ್ವಜನಿಕರ ಸುರಕ್ಷತೆಯ ಹಿತದೃಷ್ಟಿಯಿಂದ ಇಂಡಿ ತಹಶೀಲ್ದಾರ್ ನಾಗೇಂದ್ರ ಕೊಳಶೆಟ್ಟಿ ಅವರು ಸ್ವತಃ ಭೀಮಾ ನದಿ ಪಾತ್ರದ ಪ್ರವಾಹ ಪೀಡಿತ ಸೂಕ್ಷ್ಮ ಗ್ರಾಮಗಳಿಗೆ ಭೇಟಿ ನೀಡಿ ಪರಿಸ್ಥಿತಿಯನ್ನು ಪರಿಶೀಲಿಸಿದರು.

ತಹಶೀಲ್ದಾರ್ ನಾಗೇಂದ್ರ ಕೊಳಶೆಟ್ಟಿ ಅವರು ತಾಲೂಕಿನ ಪ್ರಮುಖ ನದಿ ತೀರದ ಗ್ರಾಮಗಳಾದ ಬರಗುಡಿ, ಪಡನೂರ, ಶಿರಗೂರ, ಗುಬ್ಯಾಡ ಮತ್ತು ಅಗರಖೇಡ ಸೇರಿದಂತೆ ವಿವಿಧ ಪ್ರದೇಶಗಳಿಗೆ ಅಧಿಕಾ–ರಿಗಳ ತಂಡದೊಂದಿಗೆ ಭೇಟಿ ನೀಡಿದರು.

ನದಿಯ ಒಳಹರಿವು ಹಾಗೂ ಗ್ರಾಮಗಳ ಸುರಕ್ಷತೆಯ ಕುರಿತು ಸ್ಥಳೀಯರಿಂದ ಮಾಹಿತಿ ಪಡೆದರು. ನಂತರ ಮಾತನಾಡಿದ ಅವರು ನೀರಿನ ಪ್ರಮಾಣ ಹೆಚ್ಚಾಗುತ್ತಿದ್ದು ಎಲ್ಲರೂ ಅತ್ಯಂತ ಜಾಗರೂಕರಾಗಿರಬೇಕು ಎಂದು ವಿನಂತಿಸಿಕೊಂಡರು.

ನೀರಿನ ಸೆಳೆತ ಹೆಚ್ಚಿರುವುದರಿಂದ ಸಾರ್ವಜನಿಕರು, ಯುವಕರು ಅಥವಾ ಮಹಿಳೆಯರು ಯಾವುದೇ ಕಾರಣಕ್ಕೂ ಈಜಲು, ಬಟ್ಟೆ ತೊಳೆಯಲು ಅಥವಾ ಸೆಲ್ಫಿ ತೆಗೆದುಕೊಳ್ಳಲು ನದಿಗೆ ಇಳಿಯಬಾರದು.

ನದಿ ಪಾತ್ರದ ರೈತರು ತಮ್ಮ ಹಸು, ಎಮ್ಮೆ, ಕುರಿ ಸೇ–ರಿದಂತೆ ದನ–ಕರುಗಳನ್ನು ಮೇಯಿಸಲು ನದಿಯ ಪಕ್ಕಕ್ಕೆ ಬಿಡಬಾರದು. ಸುರಕ್ಷಿತ ಹಾಗೂ ಎತ್ತರವಾದ ಪ್ರದೇಶಗಳಲ್ಲಿ ಜಾನುವಾರುಗಳನ್ನು ಕಟ್ಟಬೇಕು.

ಪ್ರವಾಹದ ಕುರಿತು ಸಾಮಾಜಿಕ ಜಾಲತಾಣಗಳಲ್ಲಿ ಹರಡುವ ಸುಳ್ಳು ವದಂತಿಗಳನ್ನು ನಂಬಬಾರದು. ತಾಲೂಕು ಆಡಳಿತ ನೀಡುವ ಅಧಿಕೃತ ಸೂಚನೆಗಳನ್ನು ಮಾತ್ರ ಪಾಲಿಸಬೇಕು ಎಂದು ಮಾಹಿತಿ ನೀಡಿದ್ದಾರೆ.

ಈ ಸಂದರ್ಭದಲ್ಲಿ ಸಿಬ್ಬಂದಿಗಳಾದ ಪಂಡಿತ್ ಕೊಡಹೊನ್ನ ಸೇರಿದಂತೆ ಗ್ರಾಮ ಆಡಳಿತ ಅಧಿಕಾರಿಗಳು ಇದ್ದರು.

# ಸಹಕಾರ ಸಂಘರ್ಷದಾಯಕವಾಗಬಾರದು : ಗುಂಡಕನಾಳಶ್ರೀ

■ ಉದಯರಶ್ಮಿ ದಿನಪತ್ರಿಕೆ




ತಾಳಿಕೋಟೆ: ಯಾವದೇ ಒಂದು ಸಹಕಾರಿ ಬ್ಯಾಂಕ್ ಬೆಳವಣಿಗೆಯತ್ತ ಸಾಗಬೇಕಾದರೆ ಅದು ಸಹಕಾರ ತತ್ವವನ್ನು ಅನುಸರಿಸುತ್ತಾ ಸಾಗಿದರೆ ಮಾತ್ರ ಬೆಳವಣಿಗೆ ಹೊಂದಲಿದೆ ಅದರೊಂದಿಗೆ ಆಡಳಿತ ಮಂಡಳಿ ಹಾಗೂ ಸಿಬ್ಬಂದಿ ಅವರ ಸೇವೆಯೂ ಪ್ರಾಮಾಣಿಕವಾಗಿರುವದು ಮುಖ್ಯ ಕಾರಣವಾಗಿರುತ್ತೆಂದು ಗುಂಡಕನಾಳ ಹಿರೇಮಠದ ಗುರುಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು ನುಡಿದರು.

ಸೋಮವಾರ ಸ್ಥಳೀಯ ಶ್ರೀ ತಾಳಿಕೋಟೆ ಸಹಕಾರಿ ಬ್ಯಾಂಕ್ ನಿ.ದ 2025/26 ನೇ ಸಾಲಿನ 67 ನೇ ವಾರ್ಷಿಕ ಸರ್ವ ಸಾಧಾರಣ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ತಾಳಿಕೋಟೆಯ ಈ ಬ್ಯಾಂಕು ಕೋಟಿ ಲಾಭ ಗಳಿಸಿರುವದನ್ನು ನೋಡಿದರೆ ಲಾಭದಾಯಕ ಬ್ಯಾಂಕ್ ಎಂಬುದನ್ನು ಎತ್ತಿ ತೋರಿಸುತ್ತದೆ. ಸುಮಾರು 3 ಶಾಖೆಗಳನ್ನು ಪ್ರಾರಂಭಿಸಿದ ಈ ಬ್ಯಾಂಕು ಗ್ರಾಹಕರಿಗೆ ಹಾಗೂ ಶೇರುದಾರರಿಗೆ ಅನುಕೂಲ ಕಲ್ಪಿಸಿರುವದು ಶ್ಲಾಘನೀಯ ಎಂದು ಶ್ರೀಗಳು ನುಡಿದರು.

ಇನ್ನೋರ್ವ ಬಿಡಿಸಿಸಿ ಬ್ಯಾಂಕ್‌ನ ನಿರ್ದೇಶಕ ಬಿ.ಎಸ್. ಪಾಟೀಲ(ಯಾಳಗಿ) ಅವರು ಸಹಕಾರಿ ತತ್ವದ ಕೆಲವು ನಿಯಮಗಳನ್ನು ತಿಳಿಹೇಳಿದರಲ್ಲದೇ ಈಗಾಗಲೇ ತಾಳಿಕೋಟೆಯ ಸಹಕಾರಿ ಬ್ಯಾಂಕ್ ವತಿಯಿಂದ ತೀರಿ ಹೋದಂತಹ ಶೇರುದಾರರಿಗೆ ಸದಸ್ಯರ ಕುಟುಂಬಕ್ಕೆ 2000 ರೂ. ಯನ್ನು ಕೊಡುತ್ತಾ ಸಾಗಿಬಂದಿರುವದನ್ನು ಹೆಚ್ಚಿಸಿ 5000 ವರೆಗೆ ಮಾಡಿದರೆ ಒಳಿತಾಗುತ್ತದೆ ಇದು ಅಲ್ಲದೇ ಪ್ರತೀ ವರ್ಷ ಎಸ್‌ಎಸ್‌ಎಲ್‌ಸಿ/ ಪಿಯುಸಿ ಶೇರುದಾರರ ಪ್ರತಿಭಾವಂತ ಮಕ್ಕಳಿಗೆ ನೀಡುವಂತಹ ಗೌರವಧನದಂತೆ ಒಳ್ಳೆಯ ಕ್ರೀಡಾಪಟುಗಳಿಗೂ ಮುಂಬರುವ ದಿನಮಾನಗಳಲ್ಲಿ ಪ್ರಶಸ್ತಿ ಹಾಗೂ ನಗದು ಬಹುಮಾನ ನೀಡುವ ಕಾರ್ಯ ಮಾಡಿದರೆ ಒಳಿತಾಗುತ್ತದೆ ಎಂದು ತಿಳಿಸಿದರು.

ಬ್ಯಾಂಕಿನ ಅಧ್ಯಕ್ಷರಾದ ಕಾಶೀನಾಥ ಸಜ್ಜನ ಮಾತನಾಡಿದರು. ಬ್ಯಾಂಕಿನ ಪ್ರಧಾನ ವ್ಯವಸ್ಥಾಪಕಿ ಶ್ರೀಮತಿ ಬಿ.ಕೆ. ಮಣೂರ ವಾರ್ಷಿಕ ವರದಿ ವಾಚಿಸಿದರು.

ಶ್ರೀ ಖಾಸ್ಗತೇಶ್ವರ ಮಠದ ಉಸ್ತುವರಿ ಮುರುಘೇಶ ವಿರಕ್ತಮಠ ಸಾನಿಧ್ಯ ವಹಿಸಿದ್ದರು.

ಇದೇ ಸಮಯದಲ್ಲಿ ಶೇರುದಾರರ ಪ್ರತಿಭಾವಂತ ಮಕ್ಕಳಿಗೆ ಸನ್ಮಾನಿಸಿ ಗೌರವಿಸಲಾಯಿತು.

ಗಣ್ಯರಾದ ಅಶೋಕ ಶೆಟ್ಟಿ, ದಶರಥಸಿಂಗ್ ಮನಗೂಳಿ, ಬ್ಯಾಂಕ್ ಉಪಾಧ್ಯಕ್ಷರಾದ ಸಿ.ಎಸ್. ಯಾಳಗಿ, ನಿರ್ದೇಶಕರಾದ ಆಯ್.ಬಿ. ಬಿಳೇಬಾವಿ, ಎಂ.ಎಸ್. ಸರಶೆಟ್ಟಿ, ಬಿ.ಎಸ್. ಹೆಬಸೂರ, ಎ.ವ್ಹಿ. ಹಜೇರಿ, ಡಿ.ಕೆ. ಪಾಟೀಲ, ಪಿ.ವ್ಹಿ. ಹಜೇರಿ, ಶ್ರೀಮತಿ ಜಿ.ಬಿ. ಕೊಡಗಾನೂರ, ಎಸ್.ವ್ಹಿ. ಬಡದಾಳಿ, ಆರ್.ಬಿ. ಕಟ್ಟಿಮನಿ, ಎಸ್.ವಾಯ್. ಬರದೇನಾಳ, ವೃತ್ತಿಪರ ನಿರ್ದೇಶಕರಾದ ಎಂ.ಬಿ. ಕೊಣ್ಣುರ, ಹಾಗೂ ಬ್ಯಾಂಕಿನ ತಾಳಿಕೋಟೆ, ಮಿಣಜಗಿ, ಬಶೆಟ್ಟಿಹಾಳ, ಶಾಖೆಗಳ ವ್ಯವಸ್ಥಾಪಕ ಸಮೀತಿಯವರು ಉಪಸ್ಥಿತರಿದ್ದರು.

ಶಿಕ್ಷಕಿ ವಿಶಾಲಾಕ್ಷಿ ಬಡಿಗೇರ ಸಂಗೀತಸೇವೆ ಸಲ್ಲಿಸಿದರು. ಸಹಾಯಕ ವ್ಯವಸ್ಥಾಪಕಿ ಶ್ರೀಮತಿ ಎಸ್.ಬಿ.ದೇಸಾಯಿ ಸ್ವಾಗತಿಸಿದರು. ಆರ್.ಎಸ್. ಬಿರಾದಾರ ನಿರೂಪಿಸಿದರು. ಬಿ.ಎಸ್.ಕನಕಗಿರಿ ವಂದಿಸಿದರು.

# ನ್ಯಾಯಾಲಯದ ತಡೆಯಾಜ್ಞೆಗೂ ಇಲ್ಲ ಮಾನ್ಯತೆ!

■ ಉದಯರಶ್ಮಿ ದಿನಪತ್ರಿಕೆ




ಮುದ್ದೇಬಿಹಾಳ: ಸಿವಿಲ್ ನ್ಯಾಯಾಲಯವು ದಾವಾ ಆಸ್ತಿಗೆ ಸಂಬಂಧಿಸಿದಂತೆ ಜು28 ರಂದೇ ಯಥ–ಾಸ್ಥಿತಿ ಕಾಯ್ದುಕೊಳ್ಳುವಂತೆ ಆದೇಶ ನೀಡಿದ್ದರೂ ನ್ಯಾಯಾಲಯದ ಆದೇಶವನ್ನು ಧಿಕ್ಕರಿಸಿ ಕಾಮಗಾರಿ ಮಾಡುತ್ತಿರುವವರ ವಿರುದ್ಧ ಜಿಲ್ಲಾಧಿಕಾರಿಗಳು ಕೂಡಲೇ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ ನ್ಯಾಯವಾದಿ ಎಸ್.ಆರ್.ಅಮರಣ್ಣವರ ದೂರಿದರು.

ಈಕುರಿತುಮಾಧ್ಯಮದವರೊಂದಿಗೆ ಮಾತನಾಡಿದ ಅವರು, ತಾಲೂಕಿನ ದೇವೂರು ಗ್ರಾಮ ವ್ಯಾಪ್ತಿಯಲ್ಲಿ ರಸ್ತೆ ಅಗಲೀಕರಣ ಕಾಮಗಾರಿ ನಡೆದಿದ್ದು, ಇಲ್ಲಿ ನನ್ನ ಕುಟುಂಬದ ಜಮೀನು ಇದೆ. ಸರ್ಕಾರದಿಂದ ಯಾವುದೇ ಪರಿಹಾರ ಹಣವಾಗಲೀ, ನೊಟೀಸಾಗಲಿ ಬಂದಿಲ್ಲ. ಈ ಬಗ್ಗೆ ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಿ ಮಧ್ಯಂತರ ತಡೆಯಾಜ್ಞೆ ಕೋರಲಾಗಿ ನ್ಯಾಯಾಲಯ ಸ್ಟೇಟಸ್ ಕೋ ಆದೇಶವನ್ನು ನೀಡಿದೆ. ಈ ಆದೇಶವನ್ನು ನಾನು ನೇರವಾಗಿ ಸಂಬಂಧಿಸಿದ ಗುತ್ತಿಗೆದಾರ–ರಿಗೆ, ಅಧಿಕಾರಿಗಳಿಗೆ ದಾಖಲೆ ಸಮೇತ ಸಲ್ಲಿಸಿದರೂ ಯಾವುದೇ ಪ್ರಯೋಜನವಾಗುತ್ತಿಲ್ಲ. ಗುತ್ತಿಗೆದಾರರು ನ್ಯಾಯಾಲಯದ ಆದೇಶವನ್ನು ಮೀರಿ ಕಾಮಗಾರಿ ಮಾಡುತ್ತಿದ್ದು ಇದರಿಂದ ನಮಗೆ ತೊಂದರೆ ಆಗುತ್ತಿದೆ.

ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ, ಕಾಮಗಾರಿ ನಿರತರಿಗೆ ಆದೇಶ ಪತ್ರ ಕೊಡಲು ಹೋದರೆ ಸ್ವೀಕರಿಸುತ್ತಿಲ್ಲ. ಕಾಮಗಾರಿಯನ್ನೂ ಬಂದ್ ಮಾಡುತ್ತಿಲ್ಲ. 112 ಗೆ ಕರೆ ಮಾಡಿದರೂ ಯಾವುದೇ ಪ್ರಯೋಜನವಾಗಿಲ್ಲ. ನ್ಯಾಯಾಲಯದ ತಡೆಯಾಜ್ಞೆ ಆದೇಶ ಇದ್ದರೂ ಇವರು ಕಾಮಗಾರಿ ಮುಂದುವರೆಸುತ್ತಿರುವದರ ಹಿಂದೆ ಏನೋ ಷಡ್ಯಂತ್ರ ಇದೆ. ಈ ಬಗ್ಗೆ ಜಿಲ್ಲಾಧಿಕಾರಿಗಳು ಕೂಡಲೇ ಗಮನ ಹರಿಸಿ ಈ ಕಾಮಗಾರಿಯನ್ನು ಕೂಡಲೇ ನಿಲ್ಲಿಸಬೇಕು. ಇಲ್ಲವಾದಲ್ಲಿ ಕುಟುಂಬ ಸಮೇತ ಬೀದಿಗಿಳಿದು ಹೋರಾಟ ನಡೆಸುವದಾಗಿ ಎಚ್ಚರಿಸಿದರು.

ಇದೇ ವೇಳೆ ಜೆ.ಎಂ.ಚಲಮಿ ವಕೀಲರು ಮಾತನಾಡಿ, ಹೊಲಗಳಲ್ಲಿ ರಸ್ತೆ ಅಗಲೀಕರಣ ಮಾಡುವದರಿಂದ ರೈತರಿಗೆ ಹಾನಿ ಆಗುತ್ತೆ. ಸೂಕ್ತ ಪರಿಹಾರ ನೀಡಿ ಕಾಮಗಾರಿ ಮಾಡಿದಲ್ಲಿ ರೈತರಿಗೆ ಅನುಕೂಲ ಆಗುತ್ತದೆ. ಆದರೆ ಯಾವುದೇ ಪರಿಹಾರ ನೀಡದೇ, ರೈತರಿಗೆ ಮಾಹಿತಿ ನೀಡದೇ ಇಂತಹ ಕಾಮಗಾರಿಗಳನ್ನು ಮಾಡುವದರಿಂದ ರೈತರು ತೊಂದರೆ ಅನುಭವಿಸುತ್ತಿದ್ದಾರೆ. ಇಲ್ಲೂ ಕೂಡ ಅದೇ ಸಮಸ್ಯೆ ಆಗುತ್ತಿದ್ದು ನ್ಯಾಯಾಲಯದ ತಡೆಯಾಜ್ಞೆ ಇದ್ದರೂ ಕಾಮಗಾರಿ ಮುಂದುವರೆಸುತ್ತಿರೋದು ವಿಪರ್ಯಾಸ. ಸಂಬಂಧಿಸಿದ ಅಧಿಕಾರಿಗಳು ಕೂಡಲೇ ಈ ಬಗ್ಗೆ ಎಚ್ಚೆತ್ತು ಈ ಕಾಮಗಾರಿಯನ್ನು ಕೂಡಲೇ ನಿಲ್ಲಿಸಿ, ನ್ಯಾಯಾಲಯದ ಮುಂದಿನ ಆದೇಶಕ್ಕೆ ಕಾಯಬೇಕು ಎಂದರು.

ಈ ವೇಳೆ ನ್ಯಾಯವಾದಿಗಳಾದ ಎಲ್. ಆರ್.ನಾಲತವಾಡ, ಎಸ್.ಸಿ.ನಾಯಕ, ಎಸ್.ಜಿ.ಹೊಕ್ರಾಣಿ, ಎಸ್.ಬಿ.ಬಿರಾದಾರ, ಸಿ.ಎಸ್.ಕಾಖಂಡಕಿ ಇದ್ದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR